# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Volume: 01 Issue : 44 WEDNESDAY 22-04-2026 PRGI No : KNKAN/26/A0962 Pages:4 Rs.2.00 M: 9742418836


## ಕೈ ನಾಯಕರ ಗುರಿಯಾಗಿರಿಸಿ ಇಡಿ ದಾಳಿ: ಸಿಎಂ ಕಿಡಿ



ಬೆಂಗಳೂರು: ಕೇಂದ್ರದ ಜಾರಿ ನಿರ್ದೇಶನಾಲಯ ಕಾಂಗ್ರೆಸ್ ನಾಯಕರನ್ನೇ ಗುರಿಯಾಗಿಸಿ ದಾಳಿ ನಡೆಸುತ್ತಿದೆ. ಬಿಜೆಪಿ ನಾಯಕರ ವಿರುದ್ಧ ದಾಳಿ ನಡೆಯುತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಬಿಟ್ ಕಾಯಿನ್ ಹಗರಣಕ್ಕೆ ಸಂಬಂಧಿಸಿದಂತೆ ಕಾಂಗ್ರೆಸ್ ಶಾಸಕ ಎನ್.ಎ. ಹ್ಯಾರೀಸ್ ಹಾಗೂ ಅವರ ಪುತ್ರನ ನಿವಾಸಗಳ ಮೇಲೆ ನಡೆದಿರುವ ದಾಳಿ ಬಗ್ಗೆ ಚಾಮರಾಜನಗರದ ಗುಂಡ್ಲುಪೇಟೆಯಲ್ಲಿಂದು ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಯಾವುದೇ ಹಗರಣವಾದರೂ ಕಾಂಗ್ರೆಸ್ ನಾಯಕರ ಮನೆ ಮೇಲೆ ಇ.ಡಿ. ದಾಳಿ ನಡೆಸುತ್ತದೆ. ಬಿಜೆಪಿ ನಾಯಕರ ವಿರುದ್ಧ ದಾಳಿ ನಡೆಸಲ್ಲ ಎಂದು ಟೀಕಿಸಿದರು.

ಚಾಮರಾಜನಗರದಲ್ಲಿ ಹಿಂದೆ ಕೊರೊನಾ ಸಂದರ್ಭದಲ್ಲಿ ಆಕ್ಸಿಜನ್ ದುರಂತದಲ್ಲಿ ಮೃತಪಟ್ಟ ಸಂತ್ರಸ್ತರಿಗೆ ನೆರವು ನೀಡುವ ಕಾರ್ಯಕ್ರಮದಲ್ಲಿ ಭಾಗಿಯಾಗುತ್ತಿದ್ದೇನೆ. ಈ ದುರಂತಕ್ಕೆ ಕಾರಣರಾದವರ ವಿರುದ್ಧ ಕ್ರಮ ಆಗಿಲ್ಲದಿರುವ ಬಗ್ಗೆ ಅಧಿಕಾರಿಗಳ ಜತೆ ಚರ್ಚೆ ನಡೆಸುತ್ತೇನೆ ಎಂದು ಅವರು ಹೇಳಿದರು.

ರಾಜ್ಯದ ಕಾಂಗ್ರೆಸ್ ನಾಯಕರ ವಿರುದ್ಧ ಮುಸ್ಲಿಂ ನಾಯಕರು ಹೈಕಮಾಂಡ್‌ಗೆ ಪತ್ರ ಬರೆದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಅಲ್ಪಸಂಖ್ಯಾತ ನಾಯಕರ ಸಮ್ಮುಖದಲ್ಲೇ ಉಪಚುನಾವಣೆಗೆ ಅಭ್ಯರ್ಥಿ ಆಯ್ಕೆ ಮಾಡಲಾಗಿತ್ತು. ನಂತರ ಅಲ್ಪಸಂಖ್ಯಾತರ ಮುಖಂಡರು ಪಕ್ಷದ ಪರ ಕೆಲಸ ಮಾಡಿಲ್ಲ ಎಂದು ಕ್ರಮ ಆಗಿದೆ. ಹೈಕಮಾಂಡ್‌ಗೆ ಎಲ್ಲಾ ಮಾಹಿತಿ ಇದೆ ಎಂದು ತಿಳಿಸಿದರು.

ಮಹಿಳಾ ಮೀಸಲಾತಿ ವಿಚಾರದಲ್ಲಿ ಬಿಜೆಪಿ ರಾಜಕೀಯ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಎಂದೂ ಮಹಿಳಾ ಮೀಸಲಾತಿ ವಿರೋಧಿಯಲ್ಲ. ಈ ಹಿಂದೆ ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಲು ರಾಜೀವ್‌ಗಾಂಧಿಯವರು ಸಂವಿಧಾನದ 73 ಮತ್ತು 74ನೇ ಪರಿಚ್ಛೇಧಗಳಿಗೆ ತಿದ್ದುಪಡಿ ತಂದಾಗ ಅದನ್ನು ರಾಜ್ಯಸಭೆಯಲ್ಲಿ ವಿರೋಧಿಸಿದವರು ಇದೇ ಎನ್‌ಡಿಎ ಎಂದು ವಾಗ್ದಾಳಿ ನಡೆಸಿದರು.

ಕಾಂಗ್ರೆಸ್ ಮಹಿಳಾ ಮೀಸಲಾತಿಗೆ ವಿರೋಧ ವ್ಯಕ್ತಪಡಿಸಿಲ್ಲ. ಕ್ಷೇತ್ರ ಪುನರ್ ವಿಂಗಡಣೆಗೆ ಮಾತ್ರ ನಮ್ಮ ವಿರೋಧ ಎಂದು ಹೇಳಿದರು. ಚಾಮರಾಜನಗರಕ್ಕೆ ಬಂದರೆ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬು ದನ್ನು ನಾನು ಸುಳ್ಳು ಮಾಡಿದ್ದೇನೆ. ಹಲವು ಬಾರಿ ನಾನು ಚಾಮರಾಜನಗರಕ್ಕೆ ಬಂದು ಹೋಗಿದ್ದೇನೆ. ಮಲೈಮಹದೇಶ್ವರಬೆಟ್ಟಕ್ಕೂ ಭೇಟಿ ನೀಡಿದ್ದೇನೆ. ಅಧಿಕಾರ ಏನೂ ಹೋಗಿಲ್ಲ. ಇದೆಲ್ಲಾ ಮೌಢ್ಯ ಎಂದು ಹೇಳಿದರು.

## ಶಾಸಕರ ವಿಶ್ವಾಸಕ್ಕೆ ಪಡೆದು ವಾರ್ಡ್ ವಿಂಗಡಣೆ: ಡಿ.ಕೆ.ಶಿ

ಬೆಂಗಳೂರು: "ಪ್ರಜಾಪ್ರಭುತ್ವ ವ್ಯವಸ್ಥೆಗೆ ಅನುಗುಣವಾಗಿ ವಿರೋಧ ಪಕ್ಷದ ಶಾಸಕರು, ಸಾರ್ವಜನಿಕರನ್ನು ವಿಶ್ವಾಸಕ್ಕೆ ಪಡೆದು ಜಿಬಿಎ ಪಾಲಿಕೆಗಳು ಹಾಗೂ ವಾರ್ಡ್ ಗಳ ಮರುವಿಂಗಡಣೆ ಮಾಡಲಾಗಿದೆ. ಆದರೆ ಈ ಬಗ್ಗೆ ಕುಮಾರಸ್ವಾಮಿ ಅವರಿಗೆ ಅರಿವಿಲ್ಲ. ಬೇಕಿದ್ದರೇ ಅವರ ಶಾಸಕರನ್ನೇ ಕೇಳಿ ತಿಳಿದುಕೊಳ್ಳಲಿ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿರುಗೇಟು ನೀಡಿದ್ದಾರೆ.



ಸದಾಶಿವನಗರ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕೇಂದ್ರ ಸರ್ಕಾರದ ಲೋಕಸಭಾ ಕ್ಷೇತ್ರ ಮರುವಿಂಗಡಣೆ ವಿಧೇಯಕ ಸಮರ್ಥಿಸಿಕೊಳ್ಳುವ ಭರದಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಅವರು ಬೆಂಗಳೂರು ಪಾಲಿಕೆಗಳ ವಾರ್ಡ್ ಮರುವಿಂಗಡಣೆ ಬಗ್ಗೆ ಯಾರೊಂದಿಗೂ ಚರ್ಚೆ ನಡೆಸಿಲ್ಲ ಎಂದು ಮಾಡಿರುವ ಆರೋಪದ ಬಗ್ಗೆ ಕೇಳಿದಾಗ, "ಬೆಂಗಳೂರು ವಾರ್ಡ್ ಗಳ ಮರುವಿಂಗಡಣೆ ವೇಳೆ ಎಲ್ಲಾ ಪಕ್ಷದ ಶಾಸಕರನ್ನು ಒಳಗೊಂಡ ಸಮಿತಿ ರಚಿಸಲಾಗಿತ್ತು. ಅವರ ಪಕ್ಷದ ಶಾಸಕರು ಸಮಿತಿಯ ಭಾಗವಾಗಿದ್ದರು. ಜೆಡಿಎಸ್ ಹಾಗೂ ಬಿಜೆಪಿ ಶಾಸಕರ ಜತೆ ಚರ್ಚೆ ಮಾಡಿ, ಅವರೆಲ್ಲರ ಅಭಿಪ್ರಾಯ ಪಡೆದ ನಂತರವೇ ಅಂತಿಮ ತೀರ್ಮಾನ ಮಾಡಲಾಗಿದೆ" ಎಂದರು.

"ಕುಮಾರಸ್ವಾಮಿ ಅವರು ದೊಡ್ಡ ವ್ಯಕ್ತಿ ಇರಬಹುದು. ನನಗೂ ಸಣ್ಣ ಅನುಭವವಿದೆ. ಈ ಅನುಭವದ ಮೇಲೆ ಹೇಗೆ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷದ ಶಾಸಕರು, ನಾಯಕರನ್ನು ಹೇಗೆ ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು ಎಂಬುದು ನನಗೂ ಗೊತ್ತಿದೆ. ನಾನು ಅವರ ಶಾಸಕರ ಜತೆ ಎಷ್ಟು ಗಂಟೆಗಳ ಕಾಲ ಚರ್ಚೆ ಮಾಡಿದ್ದೇನೆ, ಎಷ್ಟು ಗಂಟೆಗಳ ಕಾಲ ಸಾರ್ವಜನಿಕರೊಂದಿಗೆ ಸಂವಾದ ಮಾಡಲಾಗಿದೆ ಎಂದು ಕುಮಾರಸ್ವಾಮಿ ಅವರು ತಿಳಿದುಕೊಂಡು ಮಾತನಾಡುವುದು ಸೂಕ್ತ" ಎಂದು ಛೇಡಿಸಿದರು.

ಜಿಬಿಎ ಪಾಲಿಕೆಗಳ ಚುನಾವಣೆ ಯಾವಾಗ ನಡೆಯಲಿದೆ ಎಂದು ಕೇಳಿದಾಗ, "ನಾವು ಚುನಾವಣೆಗೆ ಸಿದ್ಧವಿರುವುದಾಗಿ ತಿಳಿಸಿದ್ದೇವೆ. ಉಳಿದಂತೆ ಆ ಪ್ರಕ್ರಿಯೆ ನಡೆಸಲು ರಾಜ್ಯ ಚುನಾವಣಾ ಆಯೋಗವಿದೆ, ನ್ಯಾಯಾಲಯವಿದೆ" ಎಂದು ತಿಳಿಸಿದರು.

## ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ) ಕುರಿತು ಪೂರ್ವಸಿದ್ಧತಾ ಸಭೆ

### ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಿ : ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್



**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಏಪ್ರಿಲ್ 23 ಹಾಗೂ 24 ರಂದು ನಡೆಯುವ ಸಾಮಾನ್ಯ ಪ್ರವೇಶ ಪರೀಕ್ಷೆಗಳನ್ನು ಅಚ್ಚುಕಟ್ಟಾಗಿ ಹಾಗೂ ಪಾರದರ್ಶಕವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಸಿಇಟಿ ಪರೀಕ್ಷೆ ಕುರಿತು ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷೆಗಳಲ್ಲಿ ಯಾವುದೇ ಅಕ್ರಮಗಳು ಅವ್ಯವಹಾರಗಳು ನಡೆಯದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾರ್ಥಿಗಳಿಗೆ ತುರ್ತು ಆರೋಗ್ಯ ತಪಾಸಣೆಗೆ ಸೂಕ್ತ ವ್ಯವಸ್ಥೆಗೆ ಕ್ರಮ ಕೈಗೊಳ್ಳಬೇಕು ಎಂದರು.

ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇಧಾಜ್ಞೆ ಜಾರಿ: ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡಲು ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಏಪ್ರಿಲ್ 23 ಮತ್ತು ಏಪ್ರಿಲ್ 24 ರಂದು ಬೆಳಿಗ್ಗೆ 8.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳ ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ, ಐದು ಅಥವಾ ಐದಕ್ಕಿಂತ ಹೆಚ್ಚು ಜನರು ಗುಂಪುಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್‌ಸ್ಟಾಲ್ ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಕೈ ಗಡಿಯಾರ, ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿಕೊಂಡು ತೆಗೆದುಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಮೊಬೈಲ್ ಫೋನ್ , ಬ್ಲೂಟೂರ್ಥ , ಸೈಡ್ ರೂಲ್ಸ್ , ಕ್ಯಾಲ್ಕುಲೇಟರ್ , ವೈಟ್ ಫ್ಲುಯಿಡ್ , ವೈರ್‌ಲೆಸ್ ಸೆಟ್ಸ್, ಪೇಪರ್ ಚೀಟಿ, ಬುಕ್ಸ್ / ಇತ್ಯಾದಿಗಳನ್ನು ತರುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮಸನಾಯಕ ಅವರು ಮಾತನಾಡಿ ಜಿಲ್ಲೆಯ 10 ಪರೀಕ್ಷಾ ಕೇಂದ್ರಗಳಲ್ಲಿ ಸಿಇಟಿ ಪರೀಕ್ಷೆ ಜರುಗಲಿದ್ದು 3,533 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಕೇಂದ್ರಗಳಲ್ಲಿ ಮೂಲಭೂತ ಸೌಲಭ್ಯ ಒದಗಿಸಲು ಕ್ರಮ ವಹಿಸಲಾಗಿದೆ. ಪರೀಕ್ಷೆಗಳು ಸುಗಮವಾಗಿ ಹಾಗೂ ಶಾಂತಿಯುತವಾಗಿ ಜರುಗಿಸಲು ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದರು.

ಸಭೆಯಲ್ಲಿ ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಆಲಮಟ್ಟಿ ಉದ್ಯಾನವನಕ್ಕೆ ನೂತನ ಬಸ್ ಸಂಚಾರಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ



**ಬೆಳಗಾವಿ ವಾರ್ತೆ ವಿಜಯಪುರ:** ವಿಜಯಪುರದಿಂದ ಆಲಮಟ್ಟಿ ಉದ್ಯಾನವನಕ್ಕೆ ಹೊಸದಾಗಿ ಆರಂಭಗೊಂಡ ನೂತನ ಸಾರಿಗೆ ಬಸ್ ಗೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ. ಪಾಟೀಲ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಜಯಪುರ ವಿಭಾಗದಿಂದ

ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ ಪಾಟೀಲ ಇವರ ಸೂಚನೆಯಂತೆ ವಿಜಯಪುರದಿಂದ ಜಿಲ್ಲೆಯ ಪ್ರೇಕ್ಷಣೀಯ ಸ್ಥಳ ಆಲಮಟ್ಟಿ ಉದ್ಯಾನವನಕ್ಕೆ ನೂತನ ಸಾರಿಗೆಯನ್ನು ಆರಂಭಗೊಳಿಸಲಾಗಿದೆ.

ಈ ಸಾರಿಗೆಯು ಪ್ರತಿದಿನ ಆರು ಸರತಿಯಲ್ಲಿ ವಿಜಯಪುರದಿಂದ ಆಲಮಟ್ಟಿ ಉದ್ಯಾನವನಕ್ಕೆ ಹೋಗಿ ಬರಲಿದೆ. ಮೊದಲನೇ ಪಾಳಿ ಬೆಳಿಗ್ಗೆ 10 ಗಂಟೆಗೆ ವೀರ ರಾಣಿ ಕಿತ್ತೂರ ಚೆನ್ನಮ್ಮ ಕೇಂದ್ರ ಬಸ್ ನಿಲ್ದಾಣದಿಂದ ಆರಂಭಗೊಳ್ಳಲಿದೆ.

ಆಲಮಟ್ಟಿಯ ಉದ್ಯಾನವನದಿಂದ ಕೊನೆಯ ಬಸ್ ರಾತ್ರಿ 8.20ಕ್ಕೆ ಮರಳಿ ವಿಜಯಪುರಕ್ಕೆ ಬಸ್ ಆಗಮಿಸಲಿದೆ.

ಬಳಿಕ ಮಾತನಾಡಿದ ಸಚಿವರು, ಪ್ರೇಕ್ಷಣೀಯ ಸ್ಥಳಗಳಿಗೆ ಹೊಸದಾಗಿ ತನ್ನ ಸಂಚಾರ ಆರಂಭಿಸಲಿರುವ ಈ ಬಸ್ ಸೌಲಭ್ಯವನ್ನು ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ., ಜಿಲ್ಲಾಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ರಿಷಿ ಆನಂದ, ಕೆಕೆಆರ್ ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾಯಣಪ್ಪ ಕುರುಬರ, ವಿಜಯಪುರ ಮೂರನೇ ಘಟಕದ ವ್ಯವಸ್ಥಾಪಕ ಎಸ್. ಎಂ. ವಾಲೀಕಾರ, ಸಹಾಯಕ ಸಂಚಾರ ವ್ಯವಸ್ಥಾಪಕ ಜಾನಪ್ಪ ಹುಗ್ಗೆಣ್ಣನವರ, ಪ್ರವಾಸೋದ್ಯಮ ಇಲಾಖೆಯ ಅನೀಲಕುಮಾರ ಬಣಜಿಗೇರ ಸೇರಿದಂತೆ ಜಿಲ್ಲಾ ಮಟ್ಟದ ವರೆಗೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಸವಣ್ಣನವರ ವಿಚಾರಧಾರೆಗಳು ಸರ್ವ ಕಾಲಕ್ಕೂ ಶ್ರೇಷ್ಠ

**ಬೆಳಗಾವಿ ವಾರ್ತೆ ಅಥಣಿ:** ವಿಶ್ವಗುರು ಬಸವಣ್ಣನವರು ಮಹಾನ್ ದಾರ್ಶನಿಕರು. ಅವರ ವಿಚಾರಧಾರೆಗಳು ಸರ್ವ ಕಾಲಕ್ಕೂ ಶ್ರೇಷ್ಠವಾಗಿವೆ. 12ನೇ ಶತಮಾನದಲ್ಲಿ ಸಮಾಜದಲ್ಲಿನ ಜಾತಿ ವ್ಯವಸ್ಥೆ, ಅಸಮಾನತೆ, ಅಂಧ ಶ್ರದ್ಧೆಗಳ ವಿರುದ್ಧ ವಚನ ಸಾಹಿತ್ಯದ ಮೂಲಕ ಹೋರಾಡಿ ಸಮಾನತೆಯ ಸಿದ್ಧಾಂತವನ್ನು ಸಾರಿದ ಮಹಾನ್ ಚಿಂತಕ ಬಸವಣ್ಣವರು ಎಂದು ಶಾಸಕ ಲಕ್ಷ್ಮಣ ಸವದಿ ಬಣ್ಣಿಸಿದರು.

ಅವರು ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಜಗಜ್ಯೋತಿ ವಿಶ್ವಗುರು ಶ್ರೀ ಬಸವೇಶ್ವರರ ಜಯಂತಿಯ ಪ್ರಯುಕ್ತ ಬಸವೇಶ್ವರ ಪ್ರತಿಮೆಗೆ ಪುಷ್ಪಾರ್ಪಣೆ ಸಲ್ಲಿಸಿ, ಪಲ್ಲಕ್ಕಿ ಉತ್ಸವಕ್ಕೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಜಾಪ್ರಭುತ್ವದ ಅಡಿಪಾಯ 'ಅನುಭವ ಮಂಟಪ' ಬಸವಣ್ಣನವರ ಕೊಡುಗೆಯಾಗಿದ್ದು ಜಾತಿ-ಧರ್ಮದ ಭೇದವಿಲ್ಲದ ಅನುಭವ ಮಂಟಪವನ್ನು ಸ್ಥಾಪಿಸುವ ಮೂಲಕ ಬಸವಣ್ಣನವರು ಅಂದೇ ಪ್ರಜಾಪ್ರಭುತ್ವದ ಗಟ್ಟಿ ಅಡಿಪಾಯ ಹಾಕಿದ್ದರು. 'ಕಾಯಕವೇ ಕೈಲಾಸ' ಎಂಬ ತತ್ವದಡಿ ನಾವು ಮಾಡುವ ಕೆಲಸದಲ್ಲಿ ದೈವತ್ವ ಕಾಣಬೇಕು. ಶ್ರಮಿಕ ವರ್ಗದ ಏಳಿಗೆಗಾಗಿ ಸರ್ಕಾರ ರೂಪಿಸುತ್ತಿರುವ ಯೋಜನೆಗಳು ಬಸವ ತತ್ವಕ್ಕೆ ಅನುಗುಣವಾಗಿವೆ ಎಂದರು. ಅಲ್ಲದೆ, ನುಡಿದಂತೆ ನಡೆಯುವುದೇ ಬಸವ ತತ್ವದ ಸಾರವಾಗಿದ್ದು, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವುದು ನಮ್ಮ ಸಂಕಲ್ಪವಾಗಿದೆ ಎಂದರು.



ಈ ದಿನವು ಕೇವಲ ಜಯಂತಿ ಆಚರಣೆಗೆ ಸೀಮಿತವಾಗದೇ, ಬಸವೇಶ್ವರರ ತತ್ವಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ದಿನವಾಗಿರಬೇಕು. ಬಸವೇಶ್ವರರ ಪ್ರಮುಖ ತತ್ವಗಳಲ್ಲಿ "ಕಾಯಕವೇ ಕೈಲಾಸ" ಎಂಬುದು ಅತ್ಯಂತ ಪ್ರಸಿದ್ಧ. ದುಡಿಮೆ ಮಾಡುವುದು ದೇವರ ಸೇವೆಯಷ್ಟೇ ಪವಿತ್ರವೆಂದು. ಸಮಾಜದಲ್ಲಿ ಪ್ರತಿಯೊಬ್ಬರೂ ತಮ್ಮ ಶ್ರಮದಿಂದ ಬದುಕಬೇಕು, ಯಾರೂ ಯಾರನ್ನೂ ಶೋಷಿಸಬಾರದು. ಬಸವೇಶ್ವರರ ವಚನಗಳು ಸರಳವಾಗಿದ್ದು ಜನಸಾಮಾನ್ಯರಿಗೆ ಸುಲಭವಾಗಿ ಅರ್ಥವಾಗುವಂತಿದ್ದು. ಸತ್ಯ, ಅಹಿಂಸೆ, ಧರ್ಮ ಮತ್ತು ಮಾನವೀಯತೆಯ ಮೌಲ್ಯಗಳನ್ನು ಅವರು ತಮ್ಮ ವಚನಗಳಲ್ಲಿ ಸಾರಿದ್ದಾರೆ. ಅವರ ತತ್ವಗಳನ್ನು ಇಂದಿನ ಯುವ ಪೀಳಿಗೆ ಅನುಸರಿಸಿ ಅವರ ಮಾರ್ಗಗಳನ್ನು ತಮ್ಮ ಜೀವನದುದ್ದಕ್ಕೂ ಅಳವಡಿಸಿಕೊಂಡರೆ ಜೀವನ ಮೌಲ್ಯ ಹೆಚ್ಚಾಗುತ್ತದೆ ಎಂದು ಹೇಳಿದರು

ಈ ವೇಳೆ ಕಾರ್ಯಕ್ರಮದಲ್ಲಿ ಶಿವಬಸವ ಸ್ವಾಮೀಜಿ, ಪ್ರಭು ಚನ್ನಬಸವ ಸ್ವಾಮೀಜಿ, ಮರುಳಸಿದ್ಧ ಸ್ವಾಮೀಜಿ, ಪುರಸಭೆ ಅಧ್ಯಕ್ಷೆ ಶಿವಲೀಲಾ ಬುಟಾಳೆ, ಉಪಾಧ್ಯಕ್ಷೆ ಭುವನೇಶ್ವರಿ ಯಕಂಚಿ, ಸ್ಥಾಯಿ ಸಮಿತಿ ಅಧ್ಯಕ್ಷ ದತ್ತಾ ವಾಸ್ಟರ, ಸದಸ್ಯರಾದ ರಾಜು ಗುಡೋಡಗಿ, ಪ್ರಮೋದ ಬಿಳ್ಳೂರ, ಸೈಯ್ಯದಅಮೀನ ಗದ್ಯಾಳ, ಬಸವರಾಜ ಪಾಟೀಲ, ಆಶೀಫ್ ತಾಂಬೋಳಿ ಅಧಿಕಾರಿಗಳಾದ ಪ್ರವೀಣ ಹುಣಶಿಕಟ್ಟಿ, ಈರಣ್ಣಾ ವಾಲಿ, ಮಲಿಕಾರ್ಜುನ ಮಗದುಮ್, ಬಸಗೌಡಾ ಕಾಗೆ, ಅಶೋಕ ಗುಡಿಮನಿ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಮತ್ತು ಹಿರಿಯರು ಬಸವೇಶ್ವರ ಮಂಡಳಿತ ಸದಸ್ಯರು ಉಪಸ್ಥಿತರಿದ್ದರು.

## ಶ್ರೀ ಭಗವಾನ ಬುದ್ಧ & ಹೇಮರೆಡ್ಡಿ ಮಲ್ಲಮ್ಮ ಜಯಂತಿ: ಏ. 24ರಂದು ಪೂರ್ವಭಾವಿ ಸಭೆ

ಕೊಪ್ಪಳ: ಕೊಪ್ಪಳ ಜಿಲ್ಲಾ ಕೇಂದ್ರದಲ್ಲಿ ಶ್ರೀ ಭಗವಾನ ಬುದ್ಧ ಮತ್ತು ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸಿದ್ಧತೆಗಳನ್ನು ಕೈಗೊಳ್ಳಲು ಪೂರ್ವಭಾವಿ ಸಭೆಯನ್ನು ಏಪ್ರಿಲ್ 24 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಸಭೆಯ ಅಧ್ಯಕ್ಷತೆಯನ್ನು ಕೊಪ್ಪಳ ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ವಹಿಸುವರು. ಜಿಲ್ಲಾ ಮಟ್ಟದ ಇಲಾಖೆಗಳ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಬೇಕು ಹಾಗೂ ಸಮಾಜದ ಮುಖಂಡರು ಈ ಸಭೆಯಲ್ಲಿ ಆಗಮಿಸಿ ಅಗತ್ಯ ಸಲಹೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಜ್ಯೋತಿ ಪಾದಯಾತ್ರೆಗೆ ಭವ್ಯ ಸ್ವಾಗತ



**ಬೆಳಗಾವಿ ವಾರ್ತೆ ವಿಜಯಪುರ:** ಜಗಜ್ಯೋತಿ ಬಸವೇಶ್ವರರ ಜಯಂತಿಯ ಶುಭ ಸಂದರ್ಭದಲ್ಲಿ, ಬಸವನ ಬಾಗೇವಾಡಿ ಯಿಂದ ವಿಜಯಪುರದ ಬಸವೇಶ್ವರ ವೃತ್ತದವರೆಗೆ ಹಮ್ಮಿಕೊಳ್ಳಲಾಗಿದ್ದ ಭವ್ಯ ಬಸವಜ್ಯೋತಿ ಪಾದಯಾತ್ರೆಯನ್ನು ನಗರದ ಬಸವ ಸಮಿತಿ ಹಾಗೂ ಸಿದ್ದೇಶ್ವರ ಬ್ಯಾಂಕ್ ಅಧ್ಯಕ್ಷ ರವೀಂದ್ರ ಬಿಜ್ಜರಗಿ ಮತ್ತು ಗಣ್ಯರು ಸ್ವಾಗತಿಸಿದರು.

ಬೆಂಗಳೂರಿನಲ್ಲಿ ನೆಲೆಸಿರುವ ವಿಜಯ ಪುರ ಜಿಲ್ಲೆಯ ಹಂದಿಗನೂರ ಗ್ರಾಮದ ಬಿ. ಬಿ. ಪಾಟೀಲ ಅವರ ನೇತೃತ್ವದಲ್ಲಿ ಹಾಗೂ ವಿಜಯಪುರ ಸೈಕ್ಲಿಂಗ್ ಗ್ರೂಪ್ ಸಹಯೋಗದಲ್ಲಿ ಈ ಪಾದಯಾ ತ್ರೆಯನ್ನು ಆಯೋಜಿಸಲಾಗಿತ್ತು. ನಿನ್ನೆ ರಾತ್ರಿ ಬಸವನ ಬಾಗೇವಾಡಿಯಿಂದ ಆರಂಭಗೊ ಂಡ ಈ ಪಾದಯಾತ್ರೆಯು ಮಸಬಿನಾಳ, ಉಕ್ಕಲಿ ಹಾಗೂ ಉಕುಮನಾಳ ಮಾರ್ಗ ವಾಗಿ ಇಂದು ನಸುಕಿನ ಜಾವ ಶಿವಗಿರಿಗೆ ತಲುಪಿತು. ಈ ಸಂದರ್ಭದಲ್ಲಿ ಶಿವಗಿರಿ ಕ್ಷೇತ್ರದಲ್ಲಿ ಪಾದಯಾತ್ರಿಕರಿಗೆ ಸ್ವಾಗತ ಕೋರಿ, ವಿಶೇಷ ಪೂಜೆ ಸಲ್ಲಿಸಲಾಯಿತು.

ಪಾದಯಾತ್ರೆಯ ಸಾಗಿದ ಮಾರ್ಗ ದುದ್ದಕ್ಕೂ ಗ್ರಾಮಸ್ಥರು ಭಕ್ತಿಯಿಂದ ಪಾದಯಾತ್ರಿಕರಿಗೆ ಪುಷ್ಪಗುಚ್ಛ ನೀಡಿ, ಬಸವಣ್ಣನವರ ಘೋಷಣೆಗಳನ್ನು ಕೂಗುತ್ತಾ ಅತ್ಯಂತ ಸಂಭ್ರಮದಿಂದ ಬರಮಾಡಿಕೊಂಡರು. ಈ ಯಾತ್ರೆಯಲ್ಲಿ ಬೆಂಗಳೂರಿನ ಜಗದೀಶ ದಮನಿಯಾ, ಸಂದೀಪ ಡಿಯೋ, ಉಮಾಶಂಕರ ಮೆಳ್ಳಿಗೆರೆ, ಬಿ. ಎಸ್. ಸಜ್ಜನ, ಕೃಪಾಕರ, ಹುಬ್ಬಳ್ಳಿಯ ರೂಪಾ ಕಳ್ಳಿಗುಡ್ಡ ಹಾಗೂ ಡಾ. ಶಿಲ್ಪಾ ಚರಂತಿಮಠ ಪಾಲ್ಗೊಂಡಿದ್ದರು.

ವಿಜಯಪುರ ಸೈಕ್ಲಿಂಗ್ ಗ್ರೂಪ್ ಅಧ್ಯಕ್ಷ ಡಾ. ಮಹಾಂತೇಶ ಬಿರಾದಾರ, ಉಪಾಧ್ಯಕ್ಷ ಶಿವನಗೌಡ ಪಾಟೀಲ, ಸದಸ್ಯರಾದ ಡಾ. ರಾಜು ಯಲಗೊಂಡ, ಡಾ. ಮಹಾಂತೇಶ ಹೊಸಮನಿ, ಡಾ. ಉದಯಕುಮಾರ ಜಾಧವ, ಸಚಿನ ಪಾಟೀಲ, ಡಾ. ಪ್ರವೀಣ ಚೌರ, ಡಾ. ಚೌಕಿಮಠ ಶಿವಕುಮಾರ, ಅಮೋಘ ಬಸನಾಳ, ಧ್ರುವ ಮಠ, ಸೋಮು ಮಠ, ಸಂದೀಪ ಮಡಗೊಂಡ, ಸತ್ಯ ವಿಜಯನ್, ಶಿವಾನಂದ ಯರನಾಳ, ಸಂಕೇತ ಬಗಲಿ, ಉಮೇಶ ಮೇಟಗಾರ, ನದೀಶ ಹುಂಡೇಕರ, ಶ್ರೀನಿವಾಸ, ವಿನಯ ಪಾಟೀಲ ಸೇರಿದಂತೆ ನೂರಾರು ಬಸವ ಅಭಿಮಾನಿಗಳು ಉಪಸ್ಥಿತರಿದ್ದರು.

# ಪಿ.ಕೆ. ನಾಗನೂರ ಪಿಕೆಪಿಎಸ್ ಗೆ 1.43 ಕೋಟಿ ರೂ. ನಿವ್ವಳ ಲಾಭ

**ಬೆಳಗಾವಿ ವಾರ್ತೆ ಅಥಣಿ :** ರೈತರ ಆರ್ಥಿಕ ಪ್ರಗತಿಗೆ ಮತ್ತು ಕೃಷಿ ಚಟುವಟಿಕೆಗಳಿಗೆ ಬೆನ್ನೆಲುಬಾಗಿ ನಿಲ್ಲುವ ಮೂಲಕ ಅಥಣಿ ತಾಲೂಕಿನ ನಾಗನೂರ ಪಿ.ಕೆ. ಗ್ರಾಮದ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘವು ಪ್ರಸಕ್ತ ವರ್ಷದಲ್ಲಿ 21.72 ಕೋಟಿ ರೂ. ಸಾಲ ವಿತರಿಸಿ 1.43 ಕೋಟಿ ರೂ. ನಿವ್ವಳ ಲಾಭ ಗಳಿಸಿದೆ ಎಂದು ಶಾಸಕ ಲಕ್ಷ್ಮಣ ಸವದಿ ತಿಳಿಸಿದರು.

ಅವರು ಅಥಣಿ ತಾಲೂಕಿನ ನಾಗನೂರ ಪಿ.ಕೆ. ಗ್ರಾಮದ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘದ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿ ಮಾತನಾಡಿದರು. ಸಂಘವು 1222 ಸದಸ್ಯರನ್ನು ಹೊಂದಿದ್ದು, 1.56 ಕೋಟಿ ರೂ. ಶೇರು ಬಂಡವಾಳ ಸಂಗ್ರಹಿಸಲಾಗಿದೆ. 3.03 ಕೋಟಿ ರೂ. ನಿಧಿ ಮತ್ತು 41.69 ಕೋಟಿ ರೂ. ದುಡಿಯುವ ಬಂಡವಾಳ ಹೊಂದಿದ್ದು. 22.52 ಕೋಟಿ ರೂ. ಠೇವು ಸಂಗ್ರಹಿಸಿದ್ದು ಅತೀವ ಸಂತಸ ತಂದಿದೆ ಎಂದರು.

'ರೈತ ಬಾಂಧವರು ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಿ ಭೂಮಿಯ ಫಲವತ್ತತೆಯನ್ನು ಹೆಚ್ಚಿಸುವುದರೊಂದಿಗೆ ಆರ್ಥಿಕವಾಗಿ ಪ್ರಗತಿ ಸಾಧಿಸಬೇಕು. ಸಂಘವು ನೀಡಿದ ಸಾಲಗಳನ್ನು ಸದುಪಯೋಗ ಪಡಿಸಿಕೊಂಡು ಸಕಾಲದಲ್ಲಿ ಮರುಪಾವತಿ ಮಾಡಿ, ಸಂಘದ ಪ್ರಗತಿಯೊಂದಿಗೆ ತಾವು ಆರ್ಥಿಕವಾಗಿ ಸದೃಢರಾಗಿ' ಎಂದು ಕರೆ ನೀಡಿದರು.

ಆನಂತರ ವಿವಿಧೋದ್ದೇಶಗಳ ಪ್ರಾಥಮಿಕ ಕೃಷಿ ಸಹಕಾರ ಸಂಘದ ಅಧ್ಯಕ್ಷ



ಪರಪ್ಪ ಸವದಿ ಮಾತನಾಡಿ, ನಮ್ಮ ರೈತರಿಗೆ ಆರ್ಥಿಕವಾಗಿ ಬಲ ತುಂಬುವ ನಿಟ್ಟಿನಲ್ಲಿ ಪಿಕೆಪಿಎಸ್ ವರದಾನವಾಗಿದೆ. ಶಾಸಕ ಲಕ್ಷ್ಮಣ ಸವದಿ ಮಾರ್ಗದರ್ಶನ ಹಾಗೂ ಸಂಘದ ಎಲ್ಲ ಸದಸ್ಯರ ಹಾಗೂ ಸಿಬ್ಬಂದಿಗಳ ಸಹಕಾರದಿಂದ ಸಂಘ ಪ್ರಗತಿಯತ್ತ ಸಾಗುತ್ತಿದೆ. ಸದಸ್ಯರು ಹಾಗೂ ರೈತರ ಹಿತಾಸಕ್ತಿ ಕಾಪಾಡಲು ಸಂಘ ಬದ್ಧವಾಗಿದೆ. ಸಂಘದ ಏಳಿಗೆಗೆ ಪ್ರತಿಯೊಬ್ಬರ ಕೊಡುಗೆ ಸ್ಮರಣೀಯ ಎಂದರು.

ಈ ವೇಳೆ ಸಂಘದ ಉಪಾಧ್ಯಕ್ಷ ಹನುಮಂತ ಹುದ್ದಾರ. ನಿರ್ದೇಶಕರಾದ ಗಂಗಪ್ಪ ಬಿಳ್ಳೂರ, ರಾವಸಾಬ ಐಗಳಿ, ಬಸಪ್ಪ ತೇಲಿ, ಕಲಗೌಡ ಪಾಟೀಲ, ರಾಮಪ್ಪ ಗುಡ್ಡೇಣವರ, ಮಲ್ಲಪ್ಪ ಚೌಗಲಾ, ಸಂಗಪ್ಪ ಅಂಬಿ, ಶ್ರೀಶೈಲ ಕಾಂಬಳೆ, ಸಾವಿತ್ರಿ ಪಾಟೀಲ, ರೂಪಾ ಕರಾಳೆ, ಮುಖ್ಯಕಾರ್ಯನಿರ್ವಾಹಕ ಬಸವರಾಜ ತೇಲಿ ಸೇರಿದಂತೆ ಇತರರು ಇದ್ದರು.

# ವಿಶ್ವಗುರು ಬಸವಣ್ಣ ಜಯಂತಿಗೆ ಸೀಮಿತ ಬೇಡ

**ಬೆಳಗಾವಿ ವಾರ್ತೆ ತಾಳಿಕೋಟಿ:** ಬಸವ ಜಯಂತಿ ದಿನದಂದು ವಿಶ್ವಗುರು ಬಸವಣ್ಣನನ್ನು ಕೇವಲ ಪೂಜಿಸಿ, ಅದ್ದೂರಿ ಮೆರವಣಿಗೆ ನಡೆಸಿ,ಹಾಡಿ ಹೊಗಳಿದರೆ ಸಾಲದು ಅವನ ಬದುಕಿನ ಆದರ್ಶಗಳು ನಮ್ಮ ಜೀವನದ ಭಾಗವಾಗಬೇಕು ಆಗ ಜಯಂತಿ ಆಚರಣೆಗೆ ಒಂದು ಅರ್ಥ ಬರುತ್ತದೆ ಎಂದು ಜೆಎಸ್‌ಜಿ ಫೌಂಡೇಶನ್ ಕಾರ್ಯ ದರ್ಶಿ ಸಾಹಿತಿ ಶ್ರೀಕಾಂತ ಪತ್ತಾರ ಹೇಳಿದರು.

ಸೋಮವಾರ ಪಟ್ಟಣದ ಶ್ರೀ ಬಸವೇಶ್ವರ ವೃತ್ತದ ಹತ್ತಿರ ತಾಲೂಕ ಆಡಳಿತ ತಾಲೂಕು ಪಂಚಾಯತ ಪುರಸಭೆ ಹಾಗೂ ಶ್ರೀ ಬಸವೇಶ್ವರ ಉತ್ಸವ ಸಮಿತಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು. ಬಸವಣ್ಣ 12ನೇ ಶತಮಾನದಲ್ಲಿ ವಚನ ಸಾಹಿತ್ಯದ ಮೂಲಕ ಸಮ ಸಮಾಜದ ನಿರ್ಮಾಣಕ್ಕೆ ಶ್ರಮಿಸಿದ ವಿಶ್ವದ ಮಹಾನ್ ಚೇತನ. ಅವನನ್ನು ಒಂದು ಜಾತಿಗೆ ಸೀಮಿತಗೊಳಿಸುವುದು ಅಕ್ಷಮ್ಯ ಅಪರಾಧವಾಗಿದೆ. ಎಲ್ಲರೂ ನನ್ನವರೆನ್ನುವ ವಿಶ್ವಭ್ರಾತೃತ್ವ ಹಾಗೂ ಎನಗಿಂತ ಕಿರಿಯರಿಲ್ಲ ಎಂಬ ವಿನಮ್ರ ಪ್ರಭಾವದಿಂದ ಜಗತ್ತನ್ನೇ ಬೆಳಗಿದ ಜಗಜ್ಯೋತಿ.ಇಡೀ ವಿಶ್ವಕ್ಕೆ ಕಾಯಕ ತತ್ವವನ್ನು ಸಾರಿದ ಶ್ರೇಷ್ಠ ಮಾನವತಾವಾದಿ ಬಸವಣ್ಣನವರ ಬದುಕಿನ ಅಧ್ಯಯನ ಇಂದಿನ ಅಗತ್ಯವಾಗಿದೆ, ನಮ್ಮ ಯುವ ಪೀಳಿಗೆಗೆ ಅವರ ಚಿಂತನೆಗಳನ್ನು ತಿಳಿಸಿಕೊಡುವ ಕಾರ್ಯ ನಾವೆಲ್ಲರೂ ಒಗ್ಗೂಡಿ ಮಾಡಬೇಕಾಗಿದೆ ಅಂತಹದೊಂದು ಆತ್ಮವಲೋಕನಕ್ಕೆ ಇಂದಿನ ಈ ಜಯಂತಿ ಕಾರ್ಯಕ್ರಮ ಸಾಕ್ಷಿಯಾಗಲಿ ಎಂದು ತಿಳಿಸಿದರು.

ಕ್ಷೇತ್ರ ಸಮನ್ವಯಾಧಿಕಾರಿ ಆರ್.ಬಿ. ದಮ್ಮೂರಮಠ ಮಾತನಾಡಿ ವಿಶ್ವದ ಮೊದಲ ಪ್ರಜಾಪ್ರಭುತ್ವ ಅನುಭವ ಮಂಟಪವನ್ನು ಜಾರಿಗೆ ತಂದ ಜಗಜ್ಯೋತಿ ವಿಶ್ವಗುರು ಸಂಸ್ಕೃತಿಕ ನಾಯಕ ಬಸವಣ್ಣನವರನ್ನು ಜಗತ್ತಿಗೆ ಪರಿಚಯಿಸುವ ಕಾರ್ಯ ನಾವೆಲ್ಲರೂ ಮಾಡಬೇಕಾಗಿದೆ ಎಂದರು. ತಹಸಿಲ್ದಾರ್ ಪ್ರದೀಪ ದೇವಗಿರಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.ಸಿಆರ್‌ಸಿ ರಾಜು ವಿಜಾಪುರ ಕಾರ್ಯಕ್ರಮ ನಿರ್ವಹಿಸಿದರು.

ಇದೇ ಸಂದರ್ಭದಲ್ಲಿ ಸಾಹಿತಿ, ಖ್ಯಾತವಾಗ್ಮಿ ಶ್ರೀಕಾಂತ ಪತ್ತಾರ ಹಾಗೂ ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ





ಮಹನೀಯರನ್ನು ತಾಲೂಕ ಆಡಳಿತದ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಾಪಂ ಇಒ ಅನಸೂಯಾ ಚಲವಾದಿ, ಪುರಸಭೆ ಮುಖ್ಯಾಧಿಕಾರಿ ವಸಂತ ಪವಾರ,ಪಿಎಸ್‌ಐ ಜ್ಯೋತಿ ಖೋತ, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ, ಸಹಕಾರಿ ಬ್ಯಾಂಕ್ ನಿರ್ದೇಶಕ ಮುರಿಗೆಪ್ಪ ಸರಶಟ್ಟಿ, ಬಾಪುಗೌಡ ಸಂ.ಪಾಟೀಲ, ಬಸವೇಶ್ವರ ಉತ್ಸವ ಸಮಿತಿ ಅಧ್ಯಕ್ಷ ಮಹಾಂತೇಶ ಮುರಾಳ, ಕಾಶಿನಾಥ ಮುರಾಳ, ಆರ್ ಎಸ್ ಪಾಟೀಲ (ಕೂಚಬಾಳ), ಮಾನಸಿಂಗ್ ಕೊಕಟನೂರ,ಇಬ್ರಾಹಿಂ ಮನ್ಸೂರ, ಪ್ರಕಾಶ ಹಜೇರಿ, ಶಿವಶಂಕರ ಹಿರೇಮಠ, ವಿಜಯಸಿಂಗ್ ಹಜೇರಿ, ಪರಶುರಾಮ ತಂಗಡಗಿ, ಪ್ರಭು ಬಿಳೆಭಾವಿ, ರಾಮನಗೌಡ ಬಾಗೇವಾಡಿ, ಮುಸ್ಲಿಂ ಬ್ಯಾಂಕ್ ಅಧ್ಯಕ್ಷ ಮಹಿಬೂಬ ಕೆಂಭಾವಿ, ಜಗದೀಶ ಬಿಳೆಭಾವಿ, ನಿಂಗಣ್ಣ ಕುಂಟೋಜಿ, ಡಿ.ಕೆ. ಪಾಟೀಲ,ನಾಗೇಶ ಕಟ್ಟಿಮನಿ, ಎಂ.ಕೆ. ಮೇತ್ರಿ,ಮಹಮ್ಮದ್ ಶಫೀಕ ಇನಾಮದಾರ,ನಾಗಪ್ಪ ಚಿನಗುಡಿ, ಅಶೋಕ ಜಾಲವಾದಿ,ರಾಜು ಅಲ್ಲಾಪೂರ,ಬಸವ ಸಮಿತಿಯ ಪದಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ತಾಲೂಕ ಮಟ್ಟದ ಅಧಿಕಾರಿಗಳು ಇದ್ದರು.

## ರೇಷ್ಮೆ ಇಲಾಖೆಯ ವಿವಿಧ ಯೋಜನೆಗಳಲ್ಲಿ ಸಹಾಯಧನ, ಸೌಲಭ್ಯಕ್ಕಾಗಿ ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನ

ಧಾರವಾಡ: 2026-27ನೇ ಸಾಲಿನಲ್ಲಿ ರೇಷ್ಮೆ ಇಲಾಖೆಯ ವಿವಿಧ ಯೋಜನೆಗಳಲ್ಲಿ ಸಹಾಯಧನ, ಸೌಲಭ್ಯಗಳನ್ನು ಪಡೆಯಲು ರೇಷ್ಮೆ ಬೆಳೆಗಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಹೊಸದಾಗಿ ಹಿಪ್ಪುನೇರಳೆ ತೋಟ ಸ್ಥಾಪನೆ, ಹೊಸ ಹಿಪ್ಪುನೇರಳೆ ನರ್ಸರಿ ಸ್ಥಾಪನೆ, ಹಿಪ್ಪು ನೇರಳೆ ತೋಟ, ನರ್ಸರಿ ವಿಸ್ತರಣೆ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ವೈಯಕ್ತಿಕ ಕಾಮಗಾರಿ ಅಡಿ, ರೇಷ್ಮೆ ಕೃಷಿ ಅಭಿವೃದ್ಧಿ ಚಟುವಟಿಕೆ ಕೈಗೊಳ್ಳಲು ಆಸಕ್ತಿವುಳ್ಳ ರೇಷ್ಮೆ ಬೆಳೆಗಾರರು ಮೇ 15, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಧಾರವಾಡ ರೇಷ್ಮೆ ಉಪನಿರ್ದೇಶಕರ ಕಚೇರಿ ದೂರವಾಣಿ ಸಂ: 0836-2957382, ಹುಬ್ಬಳ್ಳಿ ವಿಭಾಗ-9448873799, ಹುಬ್ಬಳ್ಳಿ ತಾಂತ್ರಿಕ ಸೇವಾ ಕೇಂದ್ರದ ರೇಷ್ಮೆ ವಿಸ್ತರಣಾಧಿಕಾರಿಗಳ ಕಚೇರಿ-9036338029, ಕಲಘಟಗಿ- 9448862276 ಇವರುಗಳನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು ಎಂದು ರೇಷ್ಮೆ ಉಪನಿರ್ದೇಶಕರು, ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಕಾರ್ಯಕ್ರಮ ಅದ್ದೂರಿ ಆಚರಣೆ

# ಜಗಜ್ಯೋತಿ ಬಸವಣ್ಣನವರ ತತ್ವಗಳು ಸಾರ್ವಕಾಲಿಕ ಸತ್ಯ: ಎಸ್. ವಿ. ಸಂಕನೂರು

**ಬೆಳಗಾವಿ ವಾರ್ತೆ ಗದಗ:** "ಜಗಜ್ಯೋತಿ ಬಸವೇಶ್ವರರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ, ಅವರು ವಿಶ್ವಮಾನವ. ಅವರ 'ಕಾಯಕವೇ ಕೈಲಾಸ' ಮತ್ತು 'ದಾಸೋಹ' ತತ್ವಗಳು ಇಂದಿನ ಆಧುನಿಕ ಯುಗಕ್ಕೂ ಅತ್ಯಂತ ಪ್ರಸ್ತುತವಾಗಿವೆ," ಜಗಜ್ಯೋತಿ ಬಸವಣ್ಣನವರ ತತ್ವಗಳು ಸಾರ್ವಕಾಲಿಕ ಸತ್ಯ ಅವರ ತತ್ವಗಳುನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ವಿಧಾನ ಪರಿಷತ್ ಶಾಸಕ ಎಸ್. ವಿ. ಸಂಕನೂರು ಹೇಳಿದರು.

ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಜಿಲ್ಲಾಡಳಿತ ಭವನದ ಅಡಿಟೋರಿಯಂ ಸಭಾಂಗಣದಲ್ಲಿ ಸೋಮವಾರ (ಎಪ್ರಿಲ್ 20ರಂದು) ಆಯೋಜಿಸಲಾಗಿದ್ದ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಜಗಜ್ಯೋತಿ ಬಸವೇಶ್ವರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಬಸವಣ್ಣನವರು "12ನೇ ಶತಮಾನದಲ್ಲಿಯೇ ಲಿಂಗ ಸಮಾನತೆ, ಜಾತಿ ಪದ್ಧತಿ ನಿರ್ಮೂಲನೆ ಮತ್ತು ಶೋಷಣೆ ಮುಕ್ತ ಸಮಾಜದ ಕನಸು ಕಂಡವರು ಬಸವಣ್ಣನವರು. ಅನುಭವ ಮಂಟಪದ ಮೂಲಕ ಅವರು ಪ್ರಜಾಪ್ರಭುತ್ವದ ಅಡಿಪಾಯ ಹಾಕಿದರು.

ನಾವು ಕೇವಲ ಅವರ ಫೋಟೋಗಳಿಗೆ ಪೂಜೆ ಮಾಡಿದರೆ ಸಾಲದು, ಅವರ ವಚನಗಳಲ್ಲಿನ ಸಾರವನ್ನು ನಮ್ಮ ದೈನಂದಿನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಕರೆ ನೀಡಿದರು. "ಇಂದಿನ ಯುವ ಪೀಳಿಗೆಗೆ ಶರಣರ ವಿಚಾರಧಾರೆಗಳನ್ನು ತಲುಪಿಸುವ ಅಗತ್ಯವಿದೆ. ಸಮಾಜದಲ್ಲಿ ಶಾಂತಿ ಮತ್ತು ಸಹಬಾಳ್ವೆ ನೆಲೆಸಬೇಕಾದರೆ ಬಸವ ಪಥವೇ ನಮಗೆ ದಾರಿದೀಪ," ಎಂದು ಸಂಕನೂರು ಅಭಿಪ್ರಾಯಪಟ್ಟರು.

"ಕಾಯಕವೇ ಕೈಲಾಸ" ಎಂಬ ಮಂತ್ರದೊಂದಿಗೆ ಸಮಾಜದಲ್ಲಿ ಸಮಾನತೆ ಮತ್ತು ಶ್ರಮದ ಗೌರವವನ್ನು ಎತ್ತಿ ಹಿಡಿದ ಜಗಜ್ಯೋತಿ ಬಸವಣ್ಣನವರ ವಿಚಾರಧಾರೆಗಳು ಕೇವಲ ಒಂದು ಕಾಲಕ್ಕೆ ಸೀಮಿತವಾಗಿಲ್ಲ, ಅವು ಅಂದಿಗೂ, ಇಂದಿಗೂ ಮತ್ತು ಎಂದಿಗೂ ಪ್ರಸ್ತುತ ಎಂದು ಜಿಲ್ಲಾಧಿಕಾರಿ ಸಿ ಎನ್. ಶ್ರೀಧರ ತಿಳಿಸಿದರು.

ಕಾಯಕವೇ ಕೈಲಾಸ' ಎಂದು ಬೋಧಿಸುವ ಮೂಲಕ ಕೆಲಸದಲ್ಲಿ ದೇವರನ್ನು ಕಾಣುವಂತೆ ಪ್ರೇರೇಪಿಸಿದರು. ದುಡಿದು ತಿನ್ನುವ ಸಂಸ್ಕೃತಿ ಮನುಷ್ಯನ





ವ್ಯಕ್ತಿತ್ವವನ್ನು ರೂಪಿಸುತ್ತದೆ ಎಂಬುದು ಅವರ ದೃಢ ನಂಬಿಕೆಯಾಗಿತ್ತು, ಸಮಾಜದ ವರ್ಗೀಕರಣದ ವಿರುದ್ಧ ಧ್ವನಿ ಎತ್ತಿದ ಬಸವಣ್ಣನವರು ಶ್ರೀಮಂತ ಕುಟುಂಬದಲ್ಲಿ ಜನಿಸಿದರೂ, ಅಂದಿನ ಸಮಾಜದಲ್ಲಿದ್ದ ವೃತ್ತಿ ಆಧಾರಿತ ಮೇಲು-ಕೀಳು ಮತ್ತು ವರ್ಗೀಕರಣದ ವಿರುದ್ಧ ಹೋರಾಡಿದರು. ಪ್ರತಿಯೊಂದು ವೃತ್ತಿಯೂ ತನ್ನದೇ ಆದ ವಿಶಿಷ್ಟತೆ ಮತ್ತು ಗೌರವವನ್ನು ಹೊಂದಿದೆ ಎಂದು ಅವರು ಸಾರಿದರು.

ಮನುಷ್ಯ ಹುಟ್ಟುವಾಗ ಏನನ್ನೂ ತರುವುದಿಲ್ಲ, ಹೋಗುವಾಗ ಏನನ್ನೂ ಒಯ್ಯುವುದಿಲ್ಲ. ಈ ಸತ್ಯವನ್ನು ಅರಿತು ಸಮಾಜದಲ್ಲಿ ಮಾನವೀಯತೆ ಮತ್ತು ಸಮಾನತೆ ಹಾಗೂ ಸಾಮರಸ್ಯವನ್ನು ಬೆಳೆಸಲು ಅವರು ಶ್ರಮಿಸಿದರು. ಮನುಷ್ಯತ್ವವನ್ನು ಪಾಲಿಸುವ ಪ್ರತಿಯೊಬ್ಬರಿಗೂ ಬಸವಣ್ಣನವರು ಮಹಾಗುರು ಎಂದು ಸ್ಮರಿಸಲಾಯಿತು ದಾನ ಮತ್ತು ಹಂಚಿ ಬಾಳುವ ಗುಣ ನಮ್ಮಲ್ಲಿ ಇರುವುದನ್ನು ಇತರರೊಂದಿಗೆ ಹಂಚಿಕೊಳ್ಳುವ 'ದಾನ'ದ ಗುಣವು ಜೀವನದಲ್ಲಿ ನೆಮ್ಮದಿಯನ್ನು ನೀಡುತ್ತದೆ. ಸ್ವಾರ್ಥವನ್ನು ಬಿಟ್ಟು, ಅವಶ್ಯಕತೆ ಇರುವವರಿಗೆ ಸಹಾಯ ಮಾಡುವುದೇ ನಿಜವಾದ ಸುಖ ಎಂದು ಬಸವಣ್ಣನವರ ತತ್ವಗಳು ನಮಗೆ ಕಲಿಸಿಕೊಡುತ್ತವೆ ಬಸವಣ್ಣನವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೆ, ಇಡೀ ಮನುಕುಲದ ಸಾಂಸ್ಕೃತಿಕ ರಾಯಭಾರಿಯಾಗಿದ್ದಾರೆ.

ನಮ್ಮ ದೈನಂದಿನ ಜೀವನದ ಧಾವಂತದಲ್ಲಿ ಮನುಷ್ಯತ್ವವನ್ನು ಮರೆಯುತ್ತಿರುವ ಈ ಸಂದರ್ಭದಲ್ಲಿ, ಬಸವಣ್ಣನವರ ವಚನಗಳು ಮತ್ತು ಅವರ ಹಾದಿ ನಮಗೆ ದಾರಿದೀಪವಾಗಬೇಕಿದೆ. ಸಮಸಮಾಜದ ನಿರ್ಮಾಣಕ್ಕೆ ಅವರ ಹೆಜ್ಜೆಗುರುತುಗಳನ್ನು ಅನುಸರಿಸುವುದು ತುಂಬಾ ಮುಖ್ಯ ಎಂದರು.

ಮೊರಾರ್ಜಿ ದೇಸಾಯಿ ವಸತಿ ಪದವಿಪೂರ್ವ ಕಾಲೇಜು ಕನ್ನಡ ಉಪನ್ಯಾಸಕರಾದ ಸೋಮಶೇಖರ ಕನಕಾಚಲ ಮಾತನಾಡಿ ಜಗಜ್ಯೋತಿ ಬಸವೇಶ್ವರರು ಕೇವಲ ಒಂದು ಜಾತಿಗೆ ಅಥವಾ ಧರ್ಮಕ್ಕೆ ಸೀಮಿತವಾದವರಲ್ಲ, ಅವರು ಇಡೀ ಮಾನವಕುಲದ ಆಸ್ತಿ. ಅವರ ವಚನಗಳ ಸಾರ ಮತ್ತು ತತ್ವಗಳು ಇಂದಿನ ಆಧುನಿಕ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿವೆ," ಎಂದು ಉಪನ್ಯಾಸಕ ಸೋಮಶೇಖರ ಕನಕಾಚಲ ಅವರು ಹೇಳಿದರು.

ಬಸವಣ್ಣನವರು "12ನೇ ಶತಮಾನದಲ್ಲೇ ಸಮಾನತೆ, ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಸಾಮಾಜಿಕ ಕ್ರಾಂತಿ ಮಾಡಿದವರು ಬಸವಣ್ಣನವರು. 'ಇವನಾರವ ಇವನಾರವ ಎನ್ನದೆ ಇವ ನಮ್ಮವ ಇವ ನಮ್ಮವ' ಎಂದು ಹೇಳುವ ಮೂಲಕ ವಿಶ್ವಬಂಧುತ್ವದ ಸಂದೇಶ ಸಾರಿದರು.ಅನುಭವ ಮಂಟಪದ ಮೂಲಕ ಪ್ರಜಾಪ್ರಭುತ್ವದ ಅಡಿಪಾಯ ಹಾಕಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಕಾಯಕವೇ ಕೈಲಾಸ ಎಂಬ ತತ್ವವನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯ," ಎಂದರು.

ಇಂದಿನ ಯುವ ಪೀಳಿಗೆಯು ಬಸವಣ್ಣನವರ ವಚನಗಳನ್ನು ಕೇವಲ ಓದುವುದಲ್ಲದೆ, ಅವುಗಳನ್ನು ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು. ಜಾತಿ ವ್ಯವಸ್ಥೆ, ಅಸಮಾನತೆ ತೊಲಗಿ ಸುಂದರ ಸಮಾಜ ನಿರ್ಮಾಣವಾಗಬೇಕಾದರೆ ಬಸವ ತತ್ವವೇ ದಾರಿದೀಪ ಎಂದು ಅವರು ಪ್ರತಿಪಾದಿಸಿ ಉಪನ್ಯಾಸ ನೀಡಿದರು.

ಪ್ರಸಾರ ಸುತಾರ ಹಾಗೂ ಗುರುನಾಥ ಸುಂದರ ವಚನ ಗಾಯನ ಪ್ರಸ್ತುತ ಪಡಿಸಿದರು. ವೀರಣ್ಣ ಅಂಗಡಿ ಮತ್ತು ಸಂಗಡಿಗರು ನಾಡಗೀತೆ ಪ್ರಸ್ತುತ ಪಡಿಸಿದರು.ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ .ವ್ಹಿ. ಬಳ್ಳಾರಿ ಸರ್ವರನ್ನು ಸ್ವಾಗತಿಸಿದರು ಪ್ರೊ. ಬಾಹುಬಲಿ ಜೈನರ ಕಾರ್ಯಕ್ರಮ ನಿರೂಪಿಸಿದರು.

ಡಾ.ಗಿರೀಜಾ ಹಸವಿ ಅವರ ಬರೆದ ಬಸವ ಚೇತನ ಎಂಬ ಗ್ರಂಥವನ್ನು ವಿಧಾನ ಪರಿಷತ್ ಶಾಸಕ ಡಾ.ಎಸ್. ವಿ. ಸಂಕನೂರು, ಜಿಲ್ಲಾಧಿಕಾರಿ ಸಿ ಎನ್. ಶ್ರೀಧರ ತ್ರಿವಿಧ ದಾಸೋಹಿ ಜಗದ್ಗುರು ಶ್ರೀ ಮನ್ನಿರಂಜನ ಡಾ.ತೊಂಟದ ಸಿದ್ದರಾಮ ಮಹಾಸ್ವಾಮಿಗಳ ಅಮೃತ ಹಸ್ತದಿಂದ ಗ್ರಂಥ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಎಸ್ ಎಸ್ ಎಲ್ ಸಿ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮುದಾಯದ ಸಾಧಕರಿಗೆ ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಬಿ ಬಿ ಅಸೂಟಿ, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ. ಕೆ.ಆರ್., ಉಪವಿಭಾಗಧಿಕಾರಿ ಗಂಗಪ್ಪ ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ ಜಗದೀಶ, ಜಿ ಪಂ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ, ಎಸ್.ಎನ್ ಬಳ್ಳಾರಿ, ವಿನಾಯಕ ಮಾನ್ವೆ ಸೇರಿದಂತೆ ಸಮಾಜದ ಗಣ್ಯರು, ಮುಖಂಡರುಗಳು, ಎಲ್ಲಾ ಇಲಾಖೆಯ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

**ಮೆರವಣಿಗೆ :** ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದ ಆವರಣದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ" ಜಗಜ್ಯೋತಿ ಶ್ರೀ ಬಸವೇಶ್ವರರ ಪ್ರತಿಮೆಗೆ ಗೌರವ ಮಾಲಾರ್ಪಣೆಯೊದಿಂಗೆ ಮೆರವಣಿಗೆಗೆ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ ಆರ್ ಚಾಲನೆ ನೀಡಿದರು. "ಕರ್ನಾಟಕದ ಸಾಂಸ್ಕೃತಿಕ ನಾಯಕ" ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಮೆರವಣಿಗೆಯು ಶ್ರೀ ಜಗದ್ಗುರು ತೋಂಟದಾರ್ಯ ಸಂಸ್ಥಾನ ಮಠದಿಂದ ಪ್ರಾರಂಭವಾಗಿ ಮಹೇಂದ್ರಕರ ಸರ್ಕಲ್, ಟಾಂಗ ಕೂಟ, ಬಸವೇಶ್ವರ ವೃತ್ತ, ಕೆ. ಎಚ್. ಪಾಟೀಲ್ ವೃತ್ತ, ಭೂಮರೆಡ್ಡಿ ಸರ್ಕಲ್, ರೋಟರಿ ಸರ್ಕಲ್ ಮಾರ್ಗವಾಗಿ ಶ್ರೀ ಜಗದ್ಗುರು ತೊಂಟಾದರ್ಯ ಸಂಸ್ಥಾನ ಮಠದ ಆವರಣದವರೆಗೆ ಮೆರವಣಿಗೆ ಬಂದು ತಲುಪಿತು.

# ಬಸವೇಶ್ವರ ಜಯಂತಿ ಆಚರಣೆ



**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಜಾತಿ ವ್ಯವಸ್ಥೆ ಹೇರಳವಾಗಿದ್ದ ಸಮಯದಲ್ಲಿ ಬಸವೇಶ್ವರರು ಜಾತಿ ವ್ಯವಸ್ಥೆಯನ್ನು ತೊಡೆದು ಹಾಕಿ ಪ್ರತಿಯೊಬ್ಬರೂ ಸಮಾನರು ಎಂಬ ಸಂದೇಶವನ್ನು ಸಾರಿದರು ಎಂದು ತಹಸೀಲ್ದಾರ ಧನಂಜಯ ಎಂ ಹೇಳಿದರು

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಜಗಜ್ಯೋತಿ ಬಸವೇಶ್ವರ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡುತ್ತ

ಮುಂದಿನ ವರ್ಷದಿಂದ ಬಸವೇಶ್ವರ ಜಯಂತಿಯನ್ನು ಸಾರ್ವಜನಿಕರು ಜೊತೆಗೂಡಿ ಅದ್ದೂರಿಯಾಗಿ ಆಚರಿಸೋಣ ಬಸವಣ್ಣನವರು ಅನುಭವ ಮಂಟಪದಲ್ಲಿ ಜಾತಿ ಲಿಂಗ ಭೇದ ವಿಲ್ಲದೆ ಪ್ರತಿಯೊಬ್ಬರಿಗೂ ಅಭಿಪ್ರಾಯಕ್ಕೆ ಮನ್ನಣೆ ನೀಡುತ್ತಿದ್ದರು ಎಂದರಲ್ಲದೆ

ಬಸವಣ್ಣನವರ ವಚನಗಳಲ್ಲಿ ಜೀವನದ ಸಾರವಿದ್ದು ಜನರಾಡುವ ಭಾಷೆಯಲ್ಲಿ ವಚನಗಳನ್ನು ಬರೆದು ಸಮಾಜದ ಅಂಕು ಡೊಂಕುಗಳನ್ನು ತಿದ್ದಲು ಅವುಗಳನ್ನು ಅಸ್ತ್ರವನ್ನಾಗಿ ಮಾಡಿಕೊಂಡಿದ್ದರು ಅವರ ಕಾಯಕವೇ ಕೈಲಾಸ ಅತ್ಯಂತ ಮಾರ್ಮಿಕವಾದದ್ದು ಎಂ ಧನಂಜಯ್ ಹೇಳಿದರು.

ಮುಖಂಡರುಗಳಾದ ಬಸವರಾಜ ಬೆಂಡಿಗೇರಿ, ಚಂಬಣ್ಣ ಬಾಳಿಕಾಯಿ, ಪುರ್ಣಾಜಿ ಕರಾಟೆ, ಪ್ರವೀಣ ಬಾಳಿಕಾಯಿ ಮಾತನಾಡಿದರು.

ಈ ಸಂದರ್ಭದಲ್ಲಿ ಕುಬೇರಪ್ಪ ಮಹಾಂತಶೆಟ್ಟರ ಎಸ್ ಬಿ ಅಣ್ಣಿಗೇರಿ, ಈರಣ್ಣ ಅಂಕಲಕೋಟಿ, ಶರಣು ಗೋಡಿ ಎಂ ಕೆ ಕಳ್ಳಿಮಠ, ನಿಂಗಪ್ಪ ಬನ್ನಿಕೊಪ್ಪ, ಟಾಕಪ್ಪ ಸಾತಪುತೆ, ಬಸವರಾಜ ಮೆಣಸಿನಕಾಯಿ, ಬಸವರಾಜ ಅಣ್ಣಿಗೇರಿ, ಅನಿಲ. ಮುಳಗುಂದ,ಶಿವಯೋಗಿ ಅಂಕಲಕೋಟಿ, ಶಿದ್ದನಗೌಡ ಬಳ್ಳೊಳ್ಳಿ, ವೀರಣ್ಣ ಕಠಾರಿ, ಚನ್ನವೀರಪ್ಪ ದಾನಿ,ದೇವಪ್ಪ ಪೂಜಾರ,ಯೋಗೇಶ ಅಣ್ಣಿಗೇರಿ ವನಿತಾ ವಡಕಣ್ಣವರ,ತಹಸೀಲ್ದಾರ ಕಚೇರಿ ಸಿಬ್ಬಂದಿ ಇದ್ದರು.

# ರಜತ ಮಹೋತ್ಸವಕ್ಕೆ ಚಾಲನೆ



**ಬೆಳಗಾವಿ ವಾರ್ತೆ ಮುನವಳ್ಳಿ:** ಪಟ್ಟಣದ ಶ್ರೀ ಸಾಯಿ ಮಂದಿರದಲ್ಲಿ ಶ್ರೀ ಸಾಯಿ ಸೇವಾ ಸಮಿತಿ ಯವರಿಂದ ಶ್ರೀ ಸಾಯಿ ಮಂದಿರದ ರಜತ ಮಹೋತ್ಸವನ್ನು ಶ್ರೀ ಗುರು ಹರಿದಾಸ ರಾಮಬಾವು ಭೋರಾಟೆ (ಕಾಕಾಮಾವೂಲಿ) ದ್ವಜಾ ರೋಹಣ ನೆರವರೆಸಿ ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸಾನಿಧ್ಯವನ್ನು ಸೋಮಶೇಖರ ಮಠದ ಶ್ರೀ ಮುರುಘೇಂದ್ರ ಶ್ರೀಗಳು, ಸತ್ಸಂಗ ಆಶ್ರಮದ ಶ್ರೀ ಮುಕ್ತಾನಂದ ಶ್ರೀಗಳು ವಹಿಸಿದ್ದರು.

ವಿಜಯ ಅಮತೆ, ಶ್ರೀಶೈಲ ಗೋಪಶೆಟ್ಟಿ, ಶ್ರೀಶೈಲ ಹಿರೇಮಠ, ಅಪ್ಪು ತಾಂದಳೆ, ಶಿವಯ್ಯ ಹಿರೆಮಠ, ಬಸವರಾಜ ಮಲಾಮರಡಿ, ಕಲ್ಲನ ಬಿಕ್ಕನಗೌಡ್ರ, ಸೋಮನಗೌಡ ದ್ಯಾಮನಗೌಡ್ರ, ಬಾಳು ಹೊಸಮನಿ, ಸೇವಾಸಮಿತಿಯ ಸರ್ವ ಸದಸ್ಯರು, ಸಾಯಿಯುವಕ ಮಂಡಳಿ ಹಾಗೂ ಸಂತ ಮಂಡಳಿಯವರು, ಸದ್ಭಕ್ತರು ಉಪಸ್ಥಿತರಿದ್ದರು.

# ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕಾರ ಮಾನವೀಯ ಮೌಲ್ಯ ಕಲಿಸಿ : ಶಾಸಕ ಲಕ್ಷ್ಮಣ ಸವದಿ

**ಬೆಳಗಾವಿ ವಾರ್ತೆ ಅಥಣಿ:** ಮಕ್ಕಳಿಗಾಗಿ ಆಸ್ತಿ ಮಾಡುವುದಕ್ಕಿಂತ, ಉತ್ತಮ ಶಿಕ್ಷಣ ನೀಡಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡುವುದು ಇಂದಿನ ಅತ್ಯಗತ್ಯ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಉತ್ತಮ ಸಂಸ್ಕಾರ. ಸಂಸ್ಕೃತಿ. ಮಾನವೀಯ ಮೌಲ್ಯಗಳನ್ನು ಕಲಿಸಿ ಸಮಾಜಕ್ಕೆ ಕೊಡುಗೆಯಾಗಿ ಕೊಡುವುದು ಪೋಷಕರ ಮತ್ತು ಶಿಕ್ಷಕರ ಜವಾಬ್ದಾರಿ ಯಾಗಿದೆ. ಉತ್ತಮ ಸಂಸ್ಕಾರವಂತ ಮಕ್ಕಳು ಸಮಾಜಕ್ಕೆ ಆಸ್ತಿಯಾಗುತ್ತಾರೆ. ಎಂದು ಶಾಸಕ ಲಕ್ಷ್ಮಣ ಸವದಿ ಹೇಳಿದರು.



ಅವರು ತಾಲೂಕಿನ ಝುಂಜರವಾಡ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು. ಮಕ್ಕಳಿಗೆ ಕೇವಲ ಅಂಕಗಳಿಗಾಗಿ ಓದಿಸದೆ, ಜೀವನ ಕೌಶಲ್ಯ ಮತ್ತು ನೈತಿಕ ಮೌಲ್ಯಗಳನ್ನು ಕಲಿಸಿ. ಮನೆಯಲ್ಲಿ ಗುರು ಹಿರಿಯರನ್ನು ಗೌರವಿಸುವುದನ್ನು ಮತ್ತು ಪ್ರೀತಿಯಿಂದ ನಡೆದುಕೊಳ್ಳುವುದನ್ನು ಕಲಿಸಿ. ಶಿಕ್ಷಣ ಕಲಿತು ಕೇವಲ ನೌಕರಿ ಮಾಡುವುದೇ ಜೀವನದ ಅಂತಿಮ ಗುರಿಯಾಗಬಾರದು. ನಮ್ಮ ನೆಲ, ಜಲದೊಂದಿಗೆ ಬೆರೆತು ಕೃಷಿಗೂ ಸಮಾನ ಪ್ರಾಮುಖ್ಯತೆ ನೀಡಬೇಕು ಎಂದು ಕರೆ ನೀಡಿದ ಅವರು, ಮುಂಬರುವ ದಿನಗಳಲ್ಲಿ ಕೃತಕ ಬುದ್ಧಿಮತ್ತೆ (ಎಐ) ತಂತ್ರಜ್ಞಾನದಿಂದ ಉದ್ಯೋಗ ಹಾಗೂ ನಮ್ಮ ಬದುಕಿನ ಮೇಲೆ ಎದುರಾಗಬಹುದಾದ ಗಂಡಾಂತರಗಳು ಹಾಗೂ ಸವಾಲುಗಳ ಬಗ್ಗೆಯೂ ಸಾರ್ವಜನಿಕರನ್ನು ಎಚ್ಚರಿಸಿದರು.

ಉತ್ತಮ ಸಮಾಜ ನಿರ್ಮಾಣದಲ್ಲಿ ತಂದೆ, ತಾಯಿ ಮತ್ತು ವಿದ್ಯೆ ಕಲಿಸಿದ ಗುರುವಿನ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಶಾಲೆಯ ಎಸ್‌ಡಿಎಂಸಿ (ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ) ಸದಸ್ಯರ ಕಾಳಜಿಯನ್ನು ಮುಕ್ತಕಂಠದಿಂದ ಹೊಗಳಿದ ಶಾಸಕರು, ರಾತ್ರಿ ವೇಳೆ ಮನೆಮನೆಗೆ ತೆರಳಿ ಟಿವಿಗಳನ್ನು ಬಂದ್ ಮಾಡಿಸುವ ಹಾಗೂ ಮುಂಜಾನೆ ಮಕ್ಕಳನ್ನು ಎಬ್ಬಿಸಿ ಓದಿಗೆ ಪ್ರೇರೇಪಿಸುವ ಕಾರ್ಯ ಇತರೆ ಶಾಲೆಗಳಿಗೆ ಮಾದರಿಯಾಗಿದೆ. ಝುಂಜರವಾಡ ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಗುರು ಹಾಗೂ ತಂದೆ-ತಾಯಿಗಳ ಪಾದಪೂಜೆ ಮಾಡಿಸುವಂತಹ ಉತ್ತಮ ಸಂಸ್ಕಾರವನ್ನು ಕಲಿಸುತ್ತಿರು ವುದು ಅತ್ಯಂತ ಶ್ಲಾಘನೀಯ ಕಾರ್ಯ ಎಂದು ಶಾಸಕರು ಹರ್ಷ ವ್ಯಕ್ತಪಡಿಸಿದ ಅವರು ಇಂತಹ ಕಾರ್ಯಕ್ರಮಕ್ಕೆ ನಾನು ಬರದೇ ಇದ್ದರೆ ಬಹುತೇಕ ತಪ್ಪಾಗುತ್ತಿತ್ತು, ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ

ಜಮಖಂಡಿ ಓಲೇಮಠದ ಪೂಜ್ಯ ಆನಂದ ದೇವರು ಮಾತನಾಡಿ ಇಂದು ಜಗತ್ತಿಗೆ 4ಜಿ, 5ಜಿ, 10ಜಿ. ಕೊಡುವ ವಿಜ್ಞಾನಿಗಳಿದ್ದಾರೆ. ಆದರೆ, ನಮ್ಮೆಲ್ಲರ ಹೊಟ್ಟೆಗೆ 'ಗಂಜಿ' ಕೊಡುವವನು ಕೇವಲ ರೈತ ಮಾತ್ರ. ಒಕ್ಕಲಿಗ ಒಕ್ಕದಿದ್ದರೆ ಜಗವೆಲ್ಲಾ ಬಿಕ್ಕುವುದು ಎಂಬ ಸತ್ಯವನ್ನು ನಾವೆಲ್ಲರೂ ಅರಿಯಬೇಕು. ಕೃಷಿಯ ಪ್ರಾಮುಖ್ಯತೆಯ ಕುರಿತು ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಕಿವಿಮಾತು ಹೇಳಿ ರೈತರ ಮಹತ್ವವನ್ನು ಸಾರಿದರು.

ಸರ್ಕಾರಿ ಕನ್ನಡ ಶಾಲೆಯಲ್ಲಿ ಓದಿದವರಿಗೆ ಭವಿಷ್ಯವಿಲ್ಲ ಎಂದು ಯಾರು ನಿಮ್ಮನ್ನು ಹೀಯಾಳಿಸುತ್ತಾರೋ, ಮುಂದೊಂದು ದಿನ ಅದೇ ಜನರ ಮುಂದೆ ನೀವು 'ಫಾರ್ಚುನರ್' ಕಾರಿನಲ್ಲಿ ಓಡಾಡುವ ಮಟ್ಟಕ್ಕೆ ಬೆಳೆದು ಸಾಧನೆ ಮಾಡಬೇಕು. ಅವಮಾನಿಸಿದವರ ಮುಂದೆಯೇ ಸನ್ಮಾನ ಪಡೆಯುವಂತೆ ಎತ್ತರಕ್ಕೆ ಬೆಳೆಯಿರಿ," ಎಂದು ವಿದ್ಯಾರ್ಥಿಗಳಿಗೆ ಸ್ಫೂರ್ತಿ ತುಂಬಿದ ಅವರು ಹಿಂದಿನ ಕಾಲದಲ್ಲಿ ತಾಯಂದಿರು ಜೋಗುಳ ಹಾಡಿ ಸಂಸ್ಕಾರ ಕಲಿಸುತ್ತಿದ್ದರು. ಆದರೆ ಇಂದು ಮಕ್ಕಳ ಅಳು ನಿಲ್ಲಿಸಲು ಮೊಬೈಲ್ ನೀಡಲಾಗುತ್ತಿದೆ. ಪೋಷಕರು ಮೊದಲು ತಮ್ಮ ಮೊಬೈಲ್ ಗೀಳು ಬಿಡಬೇಕು. ಮಕ್ಕಳಿಗೆ ತಾವು ಪಟ್ಟ ಕಷ್ಟದ ಅರಿವು ಮತ್ತು ಒಂದು ತುತ್ತು ಅನ್ನದ ಬೆಲೆಯನ್ನು ಕಲಿಸಬೇಕು, ಇಂದಿನ ಪೋಷಕರ ವರ್ತನೆ ಕುರಿತು ಕಳವಳ ವ್ಯಕ್ತಪಡಿಸಿದರು.

ಇಂಗ್ಲಿಷ್ ಭಾಷೆ ಕಲಿಯುವುದು ಇಂದಿನ ಅಗತ್ಯ ಒಂದಾಗಿದೆ ಅದು ನಮ್ಮ ಮನೆಗೆ ಕಿಟಕಿ ಇದ್ದಂತೆ. ಆದರೆ, ಮಾತೃಭಾಷೆ ಕನ್ನಡವೇ ನಮ್ಮ ಮನೆಯ ಹೆಬ್ಬಾಗಿಲಾಗಿರಬೇಕು, ಎಂದು ಸ್ಪಷ್ಟಪಡಿಸಿದ ಅವರು ಝುಂಜರವಾಡ ಶಾಲೆಯ ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸದಸ್ಯರು ಕೇವಲ ಸಂಬಳಕ್ಕಾಗಿ ಕೆಲಸ ಮಾಡದೆ, ಮನೆಮನೆಗೆ ತೆರಳಿ ಮಕ್ಕಳನ್ನು ಓದಿಸುವ ಕಾಳಜಿ ತೋರುತ್ತಿರುವುದಕ್ಕೆ ತೀವ್ರ ಮೆಚ್ಚುಗೆ ವ್ಯಕ್ತಪಡಿಸಿ. ಶಾಸಕ ಲಕ್ಷ್ಮಣ ಸವದಿ ಅವರ ಅಭಿವೃದ್ಧಿ ಕಾರ್ಯಗಳನ್ನು ಶ್ಲಾಘಿಸಿದ ಶ್ರೀಗಳು, ಬಡತನದ ಹಿನ್ನೆಲೆಯಿಂದ ಬಂದು ಅತ್ಯುನ್ನತ ಮಟ್ಟಕ್ಕೆ ಬೆಳೆದಿರುವ ಶಾಸಕ ಲಕ್ಷ್ಮಣ ಸವದಿ ಅವರು ರಾಜ್ಯದ ಇತರ ಎಲ್ಲ ಶಾಸಕರಿಗೆ ಒಂದು 'ಮೆನು ಕಾರ್ಡ್' (ಮಾದರಿ) ಇದ್ದಂತೆ, ಎಂದು ಬಣ್ಣಿಸಿದರು.

ಇದೇ ಸಂದರ್ಭದಲ್ಲಿ, ಎಸ್ ಡಿ ಎಂ ಸಿ ಶಿವನಾಂದ ಮಲೆವಾಡಿ, ಉಪಾಧ್ಯಕ್ಷ ಅಣ್ಣಾಸಾಬ ಸಂಕೋನಟ್ಟಿ, ಹಾಗೂ ಸದಸ್ಯರು ಶೀತಲ ಪಾಟೀಲ. ಮುತ್ತು ಹಿಡಕಲ. ರಾವಸಾಬ ಸಂಕೋನಟ್ಟಿ. ಸದಾಶಿವ ಜಗದಾಳ. ಮಹಾವೀರ ನೇಮಗೌಡ. ಚನ್ನಪ್ಪ ಜಕನೂರ, ಶಾಂತಪ್ಪ ಸಂಕೋನಟ್ಟಿ. ಅಪ್ಪಸಾಬ ನೇಮಗೌಡ, ಶಾಲೆಯ ಮುಖ್ಯ ಗುರುಗಳಾದ ಬಿ ಸಿ ಮಲಕಣ್ಣವರ. ಶಿಕ್ಷಕರಾದ ವಿಶ್ವನಾಥ ಸೂರ್ಯವಂಶಿ. ಪ್ರಹ್ಲಾದ ಬಡಿಗೇರ. ಜಿ ಎಸ್ ನ್ಯಾಮಗೌಡ. ಶ್ರೀಮತಿ ಎಂ ಬಿ ಖೋತ. ಸಿದ್ದಲಿಂಗ ಪೂಜಾರಿ. ಎಚ್ ಸಿ ಕಾಂತಿ. ಮಂಜು ಕೋಳಿ. ಶ್ರೀಮತಿ ಎಸ್ ಎಸ್ ಪಾಟೀಲ. ಪವನ್ ಕುಮಾರ ನಿಡೋಣಿ ಸೇರಿದಂತೆ ಗಣ್ಯರು. ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದಲ್ಲಿ ನೀರಾವರಿ ಜೊತೆಗೆ ಗುಣಮಟ್ಟದ ವಿದ್ಯುತ್, ಶಿಕ್ಷಣ ಒದಗಿಸಲು ಬದ್ಧ: ಎಂ. ಬಿ. ಪಾಟೀಲ



**ಬೆಳಗಾವಿ ವಾರ್ತೆ ವಿಜಯಪುರ:** ಗ್ರಾಮೀಣ ಭಾಗದಲ್ಲಿ ನೀರಾವರಿ ಜೊತೆಗೆ ಗುಣಮಟ್ಟದ ವಿದ್ಯುತ್ ಹಾಗೂ ಶಿಕ್ಷಣ ಒದಗಿಸಲು ಕಾರ್ಯೋನ್ಮುಖನಾಗಿದ್ದೇನೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ. ರವಿವಾರ ಬಬಲೇಶ್ವರ ತಾಲೂಕಿನ ಹೆಬ್ಬಾಳಟ್ಟಿಯಲ್ಲಿ ಚಂದ್ರಗಿರಿ ಸಿದ್ರಾಮೇಶ್ವರ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ನೂರಾರು ವರ್ಷಗಳ ಇತಿಹಾಸ ಹೊಂದಿರುವ ಈ ಜಾತ್ರೆಗೆ ನಮ್ಮ ತಂದೆಯವರ ಕಾಲದಿಂದಲೂ ಬರುತ್ತಿದ್ದೇವೆ. ದೇವರು, ಶ್ರೀಗಳು ಮತ್ತು ಗ್ರಾಮಸ್ಥರ ಆಶೀರ್ವಾದದಿಂದ ಜಲಸಂಪನ್ಮೂಲ ಸಚಿವನಾಗಿ ಶ್ರೀ ಸಿದ್ಧೇಶ್ವರ ಸ್ವಾಮೀಜಿಗಳ ಆಶಯದಂತೆ ನೀರಾವರಿ ಕೆಲಸ ಮಾಡಿದ್ದೇನೆ. ಬಾಕಿ ಕಾಮಗಾರಿಗಳು ಪ್ರಗತಿಯಲ್ಲಿವೆ. ಇದರಿಂದ ಬೇಸಿಗೆಯಲ್ಲಿ ನೀರಿನ ಬವಣೆ ನೀಗಲಿದೆ. ನೀರಾವರಿಗೆ ಪೂರಕವಾಗಿ ಗುಣಮಟ್ಟದ ವಿದ್ಯುತ್ ಒದಗಿಸಲು ಹೆಬ್ಬಾಳಟ್ಟಿ ಬಳಿ 110 ಕೆ. ವಿ. ವಿದ್ಯುತ್ ಕೇಂದ್ರ ಪ್ರಾರಂಭಿಸಲಾಗುತ್ತಿದೆ. ಇಲ್ಲಿನ ದೇವಸ್ಥಾನಕ್ಕೆ ಮೂಲಭೂತ ಸೌಲಭ್ಯ ಒದಗಿಸಲಾಗುವುದು ಎಂದು ಸಚಿವರು ತಿಳಿಸಿದರು.

ಈ ಸಂದರ್ಭದಲ್ಲಿ ಶ್ರೀ ಸಿದ್ದಲಿಂಗಯ್ಯ ರುದ್ರಯ್ಯ ಹಿರೇಮಠ ಸ್ವಾಮೀಜಿ, ಮುಖಂಡರಾದ ಅಶೋಕ ಕಾಖಂಡಕಿ, ಶ್ರೀಶೈಲ ತರಸೆ, ಸಿದರಾಯ ಪ್ರದಾನಿ, ಈಶ್ವರ ಬಂಗಾರಿ, ಚನ್ನಪ್ಪ ಕೊಪ್ಪದ, ರಫೀಕ ಸೋನಾರ, ಜಾಫರ ಇನಾಮದಾರ, ಜಗದೀಶ ಕಾಖಂಡಕಿ, ಸುಭಾಸ ಹಟ್ಟಿ, ಮಲ್ಲು ತುಂಗಳ ಸೇರಿದಂತೆ ಗ್ರಾಮದ ಹಿರಿಯರು, ಮಹಿಳೆಯರು, ಯುವಕರು ಉಪಸ್ಥಿತರಿದ್ದರು.

# ದ್ವಿದಳ ದಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ

ಬಾಗಲಕೋಟೆ: ದ್ವಿದಳ ದಾನ್ಯಗಳಲ್ಲಿ ಆತ್ಮನಿರ್ಭರತಾ ಅಭಿಯಾನ ಕಾರ್ಯಕ್ರಮವನ್ನು ಜಿಲ್ಲಯಲ್ಲಿ ಅನುಷ್ಠಾನಗೊಳಿಲಾಗುತ್ತಿದೆ. ಈ ಯೋಜನೆಯಡಿ ಕೊಯ್ಲೋತ್ತರ ಮೂಲಭೂತ ಸೌಕರ್ಯಾಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗಿದ್ದು, ಸಂಸ್ಕರಣೆ ಮತ್ತು ಪ್ಯಾಕೇಜಿಂಗ್ ಘಟಕಗಳ ಸ್ಥಾಪನೆಗೆ ಅವಕಾಶ ಕಲ್ಪಿಸಲಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ರವರು ತಿಳಿಸಿದ್ದಾರೆ. ಇದರ ಅಂಗವಾಗಿ ಆಸಕ್ತ ರೈತ ಉತ್ಪಾದಕ ಸಂಸ್ಥೆಗಳು, ಕ್ಲಸ್ಟರ್ ಮಟ್ಟದ ಒಕ್ಕೂಟಗಳು, ಪ್ರಾಥಮಿಕ ಕೃಷಿ ಪತ್ತಿನ ಸಂಘಗಳು, ಯಾವುದೇ ನೋಂದಾಯಿತ ಸಂಸ್ಥೆಗಳು ಹಾಗೂ ವೈಯಕ್ತಿಕ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗುತ್ತಿದೆ. ಆಸಕ್ತರು ತಮ್ಮ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಅರ್ಜಿಗಳನ್ನು ಸಲ್ಲಿಸಲು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ತಮ್ಮ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಭೇಟಿ ನೀಡಬಹುದಾಗಿದೆ.

# ಬಸವ ಸಂದೇಶ ಪ್ರಪಂಚ ರಾಷ್ಟ್ರಗಳಿಗೆಲ್ಲಾ ತಲುಪಿದೆ

## ಭಾರತದಲ್ಲಿ ಮಾತ್ರ ಇನ್ನೂ 'ಅವನಾರವ -ಇವನಾರವ' ಎನ್ನುತ್ತಿರುವುದು ವಿಪರ್ಯಾಸ : ಪ್ರೊ.ಕರಿಗೂಳಿ



**ಬೆಳಗಾವಿ ವಾರ್ತೆ ಗಂಗಾವತಿ :** 20ರ ಸೋಮವಾರದಂದು ಶ್ರೀರಾಮನಗರದ ಚಿಲುಕೂರಿ ನಾಗೇಶ್ವರ ರಾವ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಾಡಿನ ಸಾಂಸ್ಕೃತಿಕ ನಾಯಕ, ವಿಶ್ವಗುರು ಜಗಜ್ಯೋತಿ ಬಸವೇಶ್ವರರ ಜಯಂತಿ ಆಚರಿಸಲಾಯಿತು.

ಬಸವಣ್ಣ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಐ.ಕ್ಯೂ.ಎ.ಸಿ. ಸಹಸಂಚಾಲಕ ಡಾ.ವಿರುಪಾಕ್ಷ ಕೆ. ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಸಮಾನತೆಯನ್ನು ಸಾರಿದ ಬಸವಣ್ಣ ನಮಗೆ ಆದರ್ಶ ಎಂದು ಅಭಿಪ್ರಾಯಪಟ್ಟರು.

ನಂತರ ಮಾತನಾಡಿದ ಕಾಲೇಜಿನ ಸಾಂಸ್ಕೃತಿಕ ಕೋಶದ ಸಂಚಾಲಕರಾದ ವೀರೇಶ ಅವರು ಪುರೋಹಿತಶಾಹಿಯನ್ನು ವಿರೋಧಿಸಿ ದುಡಿಯುವ ವರ್ಗದ ಜನರನ್ನು ಒಗ್ಗೂಡಿಸಿ ಅನುಭವ ಮಂಟಪ ಕಟ್ಟಿದ ಹರಿಕಾರ ಎಂದು ತಿಳಿಸಿದರು.

ನಂತರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿಕೊಂಡಿದ್ದ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಕರಿಗೂಳಿ ಮಾತನಾಡಿ ಬಸವಣ್ಣ ಅವರ ಸಮಾನತೆಯ ಹಾಗೂ ಆಧ್ಯಾತ್ಮ ಭಕ್ತಿಯ ಸಂದೇಶವು ಕಲ್ಯಾಣದಿಂದ ಥೇಲ್ಸ್ ನಗರದವರೆಗೆ ಪ್ರಪಂಚದಾದ್ಯಂತ ಹಬ್ಬಿದೆ, ಆದರೂ ಈ ನಾಡಲ್ಲಿ ಇನ್ನೂ ಇವನಾರವರ ಅವನಾರವರ ಎಂದು ಕೇಳುತ್ತಿರುವುವುದು ವಿಪರ್ಯಾಸ ಎಂದರು.

ಬಸವಾದಿ ಶರಣರಿಂದ ರಚಿತವಾದ ಸಾವಿರಾರು ವಚನಗಳು ಇಂದು ಕಸ್ತೂರಿ ಕನ್ನಡ ಭಾಷೆಯಿಂದ ಭಾರತದ ಎಲ್ಲಾ 28 ಭಾಷೆಗಳಿಗೆ ಹಾಗೂ 9 ವಿದೇಶಿ ಭಾಷೆಗಳಿಗೆ ಅನುವಾದಗೊಂಡಿವೆ. ಅಧ್ಯಾತ್ಮಿಕತೆಯನ್ನು ಸರಳಗೊಳಿಸಿ ದುಡಿಯುವ ವರ್ಗಕ್ಕೆ ಸ್ವಯಂ ಸಾಕ್ಷಾತ್ಕಾರದ ಮಾರ್ಗ ನೀಡಿದ ಜಗಜ್ಯೋತಿ ಬಸವಣ್ಣನವರು ಎಂದು ತಿಳಿಸಿದರು.

ಆಡಳಿತ ಸಿಬ್ಬಂದಿ ಜಬೀನಾ ಬೇಗಂ, ಸಹಾಯಕ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕುಕನೂರು : ರೈತರಿಂದ ಸಂಭ್ರಮದ ಬಸವ ಜಯಂತಿ



**ಬೆಳಗಾವಿ ವಾರ್ತೆ ಕುಕನೂರು :** ಸೋಮವಾರದಂದು ಪಟ್ಟಣದ ರೈತ ಭಾಂಧವರು ಸಂಭ್ರಮದಿಂದ ಬಸವ ಜಯಂತಿ ಆಚರಿಸಿದರು.

ಬಸವ ಜಯಂತಿಯ ಅಂಗವಾಗಿ ಸೋಮವಾರ ಸಾಯಂಕಾಲ ರೈತರು ತಮ್ಮ ತಮ್ಮ ಎತ್ತುಗಳಿಗೆ ಭಕ್ತಿಯಿಂದ ಪೂಜೆ ಸಲ್ಲಿಸುವ ಮೂಲಕ ಅವುಗಳನ್ನು ಶೃಂಗಾರಗೊಳಿಸಿ ಪಟ್ಟಣದ ರಾಘವಾನಂದ ಮಠದಿಂದ ಬಸವೇಶ್ವರರ ಭಾವಚಿತ್ರ ಹಾಗೂ ಎತ್ತುಗಳ ಮೆರವಣಿಗೆಯು ಭಾಜಾ, ಭಜಂತ್ರಿಗಳೊಂದಿಗೆ ಮಹಾಮಾಯ ದೇವಸ್ಥಾನದ ರಥ ಬೀದಿಯಿಂದ ವೀರಭದ್ರಪ್ಪ ವೃತ್ತದ ಮೂಲಕ ಶ್ರೀ ಜೋಡು ಮಾರುತೇಶ್ವರನ ದೇವಸ್ಥಾನದವರೆಗೂ ಅತ್ಯಂತ ಸಡಗರ ಸಂಭ್ರಮದಿಂದ ಮೆರವಣಿಗೆ ಜರುಗಿತು.

ಮೆರವಣಿಗೆಯಲ್ಲಿ ಶೃಂಗಾರಗೊಂಡ ರೈತರ 40ರಿಂದ 50 ಜೋಡೆತ್ತುಗಳಿಗೆ ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆ ತಾಲೂಕ ಘಟಕ ವತಿಯಿಂದ ಹಣೆಕಟ್ಟು ವಿತರಿಸಲಾಯಿತು.

ನಂತರ ಸಂಘಟನೆಯ ತಾಲೂಕ ಅಧ್ಯಕ್ಷ ದೇವಪ್ಪ ಸೋಬಾನ ಮಾತನಾಡಿ ಬಸವಣ್ಣನವರು ಹೇಳುವ ಹಾಗೆ ಶರಣರ ದೃಷ್ಟಿಯಲ್ಲಿ ಸ್ವರ್ಗ ನರಕಗಳ ಕಲ್ಪನೆ ಕೇವಲ ಕಾಲ್ಪನಿಕ,

ಮರ್ತ್ಯ ಲೋಕವೆಂಬುದು ಕರ್ತಾರನ ಕಮ್ಮಟವಯ್ಯ<br>
ಇಲ್ಲಿ ಸಲ್ಲುವವರು ಅಲ್ಲಿಯೂ ಸಲ್ಲುವರಯ್ಯಾ,<br>
ಇಲ್ಲಿ ಸಲ್ಲದವರು ಅಲ್ಲಿಯೂ ಸಲ್ಲರು

ಕೂಡಲಸಂಗಮದೇವಾಅಲ್ಲಿ ಸಲ್ಲಬೇಕಾದರೆ, ಇಲ್ಲಿಯೂ ಸಲ್ಲಬೇಕು ಎಂಬ ಸಂದೇಶದ ಮೂಲಕ ಇಲ್ಲಿನ ಬದುಕನ್ನು ಸುಂದರಗೊಳಿಸಿಕೊಳ್ಳಬೇಕೆಂಬ ಶರಣರ ವಿಚಾರಧಾರೆ, ಅನನ್ಯವಾದುದು ಆದ್ದರಿಂದ ಮೊದಲು ಹುಟ್ಟಿದ ಪ್ರತಿಯೊಬ್ಬರು ನಾವು ಏನು ಮಾಡುತ್ತೇವೆ ಎಂಬುದನ್ನು ಅರಿತು ನಡೆಯಬೇಕು ಎಂದು ಮಾರ್ಮಿಕವಾಗಿ ಮಾತನಾಡಿದರು.

ನಂತರ ಗೌರವಾಧ್ಯಕ್ಷ ಶರಣಪ್ಪ ಚಂಡೂರು, ಉಪಾಧ್ಯಕ್ಷ ಮಲ್ಲಪ್ಪ ಚಳ್ಳಮರದ, ಮಾತನಾಡಿದರು.

ಈ ಸಂದರ್ಭದಲ್ಲಿ ಭೋಗೇಶ್ ಕಾಟ್ರಳ್ಳಿ, ಉಮೇಶ್ ಬೆದವಟ್ಟಿ, ಪೂಜಾ ಜೈನ್, ಯುವರಾಜ ಜಾಧವ್, ಶರಣಪ್ಪ ಯತ್ನಟ್ಟಿ, ಬಸವರಾಜಪ್ಪ ಸಬರದ, ಮಲ್ಲಪ್ಪ ಚಳ್ಳಮರದ, ವಿಶಾಲ್ ಜೈನ್, ಬಾಳಪ್ಪ ಭಜಂತ್ರಿ, ಶಿವಪ್ಪ ಭಂಗಿ, ಬಸವರಾಜ ಲಾಲಗೊಂಡರ, ಬಸಪ್ಪ ಈಬೇರಿ, ಶಿವಪ್ಪ ಸಬರದ, ಕಳಕಪ್ಪ ಅಳವಂಡಿ, ಶರಣಪ್ಪ ಚಂಡೂರು, ರೇವಣಪ್ಪ, ಶ್ರೀಕಾಂತ್ ಬಿಳಗಿ, ಈರಪ್ಪ, ಯಲ್ಲಪ್ಪ, ಶರಣಪ್ಪ ವಿ . ಚಂಡೂರ್ , ಬಸಪ್ಪ ಎಲ್ , ಹಾಗೂ ರೈತಬಾಂಧವರು ಇತರರು ಇದ್ದರು.

# ಶಾರದಾ ದೇಗುಲದಲ್ಲಿ ಸಂಭ್ರಮದ ಶಂಕರ್ ಜಯಂತೋತ್ಸವ ಆಚರಣೆ

## ಧರ್ಮ ರಕ್ಷಣೆಗೆ ಸಂಘಟನೆಯೇ ಬಲ : ನಾರಾಯಣರಾವ್ ವೈದ್ಯ

**ಬೆಳಗಾವಿ ವಾರ್ತೆ ಗಂಗಾವತಿ :** ಸನಾತನ ಧರ್ಮವಾದ ಹಿಂದೂ ಧರ್ಮದ ರಕ್ಷಣೆಗಾಗಿ ಪ್ರತಿಯೊಬ್ಬರೂ ಸಂಘಟಿತ ರಾಗಬೇಕಾದ ಅವಶ್ಯಕತೆ ಇದ್ದು ಸಂಘಟನೆಯಿಂದ ಮಾತ್ರ ಒಗ್ಗಟ್ಟು ಮೂಡಿಸಲು ಸಾಧ್ಯ ಎಂದು ಶಂಕರ ಮಠದ ಧರ್ಮದರ್ಶಿ ನಾರಾಯಣರಾವ್ ವೈದ್ಯ ಹೇಳಿದರು.

ಅವರು ಮಂಗಳವಾರದಂದು ನಗರದ ಶಾರದಾ ದೇಗುಲದಲ್ಲಿ ಆದಿ ಗುರು ಶ್ರೀ ಶಂಕರಾಚಾರ್ಯರ ಜಯಂತೋತ್ಸವ ಕಾರ್ಯಕ್ರಮದ ಧರ್ಮ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಧರ್ಮಕ್ಕೆ ಆಪತ್ತು ಬಂದಾಗ ಭಗವಂತ ಯಾವುದೇ ರೂಪದಲ್ಲಿ ಭೂಮಿಗೆ ಆಗಮಿಸಿ ಧರ್ಮ ರಕ್ಷಣೆ ಮಾಡುತ್ತಾರೆ ಎಂಬುವುದಕ್ಕೆ ಆದಿ ಗುರು ಶ್ರೀ ಶಂಕರಾಚಾರ್ಯ ಸಾಕ್ಷಿಯಾಗಿದ್ದಾರೆ ಎಂದರು.

ಕೇಂದ್ರ ಸರ್ಕಾರದ ಆದೇಶದನ್ವಯ ವಿಶ್ವ ದಾರ್ಶನಿಕರ ದಿನಾಚರಣೆಯನ್ನಾಗಿ ಶ್ರೀ ಶಂಕರಾಚಾರ್ಯರ ಜಯಂತಿ ಉತ್ಸವವನ್ನು ಆಚರಿಸುವಂತೆ ಆದೇಶಿಸಿದೆ. ಅದ್ವೈತ ಸಿದ್ಧಾಂತದ ಮೂಲಕ ದೇಶದ ನಾಲ್ಕು ದಿಕ್ಕುಗಳಲ್ಲಿ ಶ್ರೀಮಠಗಳನ್ನು ಸ್ಥಾಪಿಸಿ ದೇಶದ ಜನತೆ ಒಗ್ಗಟ್ಟಿನಿಂದ ಧರ್ಮ ರಕ್ಷಣೆಯ ಮೂಲವಾಗಿದೆ ಧರ್ಮ ಜನರನ್ನು ಒಂದು ಗೂಡಿಸುವ ಸಾಧನವಾಗಿದೆ ಈ ಹಿನ್ನೆಲೆಯಲ್ಲಿ ವಿಪ್ರ ಸಮಾಜ ಸಂಘಟನೆ ಆಗಬೇಕೆಂದು ತಿಳಿಸಿದರು.

ಬೆಳಿಗ್ಗೆ ಶಾರದಾದೇವಿ ಸೇರಿದಂತೆ ಪರಿವಾರ ದೇವರುಗಳಿಗೆ ಅಭಿಷೇಕ ಅಷ್ಟೋತ್ತರ ಪಾರಾಯಣ ಭಜನೆ ಪಲ್ಲಕ್ಕಿ ಉತ್ಸವ ಹಾಗೂ ಶ್ರೀ ಶಂಕರಾಚಾರ್ಯರ ಉತ್ಸವ ಮೂರ್ತಿಯ ಹಾಗೂ ಪಾದುಕೆ ಗಳ ತೊಟ್ಟಿಲು ಉತ್ಸವ ಮತ್ತಿತರ ಕಾರ್ಯಕ್ರಮಗಳನ್ನು ವೇದಮೂರ್ತಿ ಮಹೇಶ್ ಭಟ್ ಜೋಶಿ ಹಾಗೂ ದೇವಸ್ಥಾನದ ಪ್ರಧಾನ ಅರ್ಚಕ ಕುಮಾರ್ ಭಟ್ ನೆರವೇರಿಸಿದರು.

ಈ ವೇಳೆ ಶಕುಂತಲಾ ಹಾಗೂ ಕವಿತಾ ದಿಗ್ಗಾವಿ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದರು.



ಜಗನ್ನಾಥ ಅಳವಂಡಿ ಕರ್, ಕಾಶೀನಾಥ್ ಜೋಶಿ, ಕೆ.ವಿ ಜೋಶಿ, ಕೃಷ್ಣ ಗೋಪಾಲ್ ಭಟ್ ಧರ್ಮಾಧಿಕಾರಿ, ರಾಘವೇಂದ್ರ ಅಳವಂಡಿಕರ್, ವಿನಾಯಕ ಭಟ್ ವೈದ್ಯ, ಭೀಮ್ ಭಟ್ ಕರಮುಡಿ, ದತ್ತಾತ್ರೇಯ ಗಾಣಿಕರ ಚಿತ್ರಗಾರ ಸುವರ್ಣ, ಗಾಯತ್ರಿ ಅಳವಂಡಿಕರ್, ಶೇಷಗಿರಿ ಗಡಾದ್, ಅನಿಲ್ ಅಳವಂಡಿ ಸೇರಿದಂತೆ ಶಾರದಾ, ಶಂಕರ ಭಕ್ತ ಭಜನಾ ಮಂಡಳಿ, ಸತ್ಯ ದೇವೇಶ ಭಜನಾ ಮಂಡಳಿ, ಯೋಗೀಶ್ವರ ಯಾಜ್ಞವಲ್ಕ್ಯ ಭಜನಾ ಮಂಡಳಿ ಗಂಗಾದೇಶ್ವರ ಮಹಿಳಾ ಭಜನಾ ಮಂಡಳಿ ಸೇರಿದಂತೆ ಅಪಾರ ಆಸ್ತಿಕ ಬಂಧುಗಳು ಪಾಲ್ಗೊಂಡಿದ್ದರು.

# ಮೀನುಗಾರಿಕೆ ಉಚಿತ ಕಿಟ್ ಮತ್ತು ಲೈಫ್ ಜಾಕೇಟುಗಳ ವಿತರಣೆ



**ಬೆಳಗಾವಿ ವಾರ್ತೆ ವಿಜಯಪುರ:** ಬಬಲೇಶ್ವರ ಮತಕ್ಷೇತ್ರದ ನಾನಾ ಫಲಾನುಭವಿಗಳಿಗೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಅವರು ಸೋಮವಾರ ಮೀನುಗಾರಿಕೆ ಉಚಿತ ಕಿಟ್ ಮತ್ತು ಲೈಫ್ ಜಾಕೇಟುಗಳನ್ನು ವಿತರಿಸಿದರು.

ರಾಜ್ಯ ವಲಯ ಮತ್ತು ಜಿಲ್ಲಾ ಪಂಚಾಯಿತಿ ಯೋಜನೆಯಡಿ ಒಟ್ಟು 61 ಜನ ಫಲಾನುಭವಿಗಳು ಆಯ್ಕೆಯಾಗಿದ್ದು, ಅವರಲ್ಲಿ 11 ಫಲಾನುಭವಿಗಳಿಗೆ ಸಚಿವರು ಸಾಂಕೇತಿಕವಾಗಿ ಕಿಟ್ ಮತ್ತು ಲೈಫ್ ಜಾಕೇಟ್ ವಿತರಿಸಿದರು. ಈ ಯೋಜನೆಯಡಿ ಬಬಲೇಶ್ವರ ತಾಲೂಕಿನ ಕೃಷ್ಣಾ ನದಿಯಲ್ಲಿ ಮೀನುಗಾರಿಕೆ ನಡೆಸುವ ಜೈನಾಪುರ, ಬಬಲಾದ, ದೇವರಗೆಣ್ಣೂರು, ಬೆಳ್ಳುಬ್ಬಿ, ಕಣಬೂರು, ಸುತಗುಂಡಿ, ತಿಕೋಟಾ ತಾಲೂಕಿನ ಕೆರೆಯಲ್ಲಿ ಮೀನುಗಾರಿಕೆ ನಡೆಸುವ ಬರಟಗಿ, ಅರಕೇರಿ, ಮಖಣಾಪುರ ಗ್ರಾಮದ ಮೀನುಗಾರರಿಗೆ ಕಿಟ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಎಂ. ಎಚ್. ಭಾಂಗಿ, ಸಹಾಯಕ ನಿರ್ದೇಶಕ ಶ್ರೀಶೈಲ ಎಸ್. ಗಂಗನಳ್ಳಿ, ಡೋಮನಾಳ ಮೀನುಗಾರಿಕೆ ಸಹಕಾರಿ ಸಂಘದ ಅಧ್ಯಕ್ಷ ಶ್ರೀರಾಮಸಿಂಗ್ ರಾಠೋಡ ಸೇರಿದಂತೆ ಪದಾಧಿಕಾರಿಗಳು, ಇಲಾಖೆ ಸಿಬ್ಬಂದಿ ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ತಾಲೂಕು ಆಡಳಿತದ ವತಿಯಿಂದ ಶ್ರೀ ಶಂಕರಾಚಾರ್ಯರ ಜಯಂತ್ಯೋತ್ಸವವನ್ನು ಶ್ರೀ ಶಂಕರಾಚಾರ್ಯರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚರಿಸಲಾಯಿತು. ಈ ಸಂದರ್ಭದಲ್ಲಿ ಕಂದಾಯ ಇಲಾಖೆಯ ಅಧಿಕಾರಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ವಿವಿಧ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು, ಸಾರ್ವಜನಿಕರು ಇತರರು ಭಾಗವಹಿಸಿದ್ದರು.

# ಹಳ್ಳ-ಕೊಳ್ಳ ಒತ್ತುವರಿ ತೆರವುಗೊಳಿಸಿ, ಸಹಕರಿಸಿ: ರೈತರಿಗೆ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲ ಮನವಿ

**ಬೆಳಗಾವಿ ವಾರ್ತೆ ವಿಜಯಪುರ:** ಬಬಲೇಶ್ವರ ಮತಕ್ಷೇತ್ರ ಸೇರಿದಂತೆ ಜಿಲ್ಲೆಯಲ್ಲಿ ಬಹುತೇಕ ಗ್ರಾಮಗಳಲ್ಲಿ ಹಳ್ಳ-ಕೊಳ್ಳಗಳು ಒತ್ತುವರಿಯಾಗಿವೆ. ರೈತರು ಸ್ವಯಂ ಪ್ರೇರಣೆಯಿಂದ ಹಳ್ಳ ಒತ್ತುವರಿ ತೆರವುಗೊಳಿಸಬೇಕು. ಅಲ್ಲಿ ಬೆಳೆದಿರುವ ಗಿಡ-ಗಂಟಿ ತೆಗೆದು ಸಹಕರಿಸಿದರೆ ಹಳ್ಳ ತುಂಬಿಸುವ ಮೂಲಕ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟದ ಹೊಳೆಯನ್ನೇ ಹರಿಸುವೆ ಎಂದು ಬೃಹತ್ ಮತ್ತು ಮಧ್ಯಮ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಹೇಳಿದರು.

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ವತಿಯಿಂದ ಬಬಲೇಶ್ವರ ತಾಲೂಕಿನ ನಿಡೋಣಿ-ಯಕ್ಕುಂಡಿ-ನಾಗರಾಳ- ಕುಮಠೆ-ಅರ್ಜುಣಗಿ ಹಂಗಣಿ, ಕಾತ್ರಾಳ, ಚಿಕ್ಕಲಕಿ, ನಂದ್ಯಾಳ ದನ್ನರಗಿ, ಟಕ್ಕಳಕಿ, ಬಿಜ್ಜರಗಿ, ಗೊಣಸಗಿ ಮತ್ತು ಕನಮಡಿ (ಗುಲಗಂಜಿ) ಹಳ್ಳಿಗಳಿಗೆ ಅಡ್ಡಲಾಗಿ ಸರಣಿ ಚೆಕ್ ಡ್ಯಾಂ ರೀಚಾರ್ಜ್ ಶಾಫ್ಟ್ ಗಳನ್ನು ನಿರ್ಮಾಣ ಮಾಡುವ ಮೂಲಕ ಅಂತರ್ಜಲ ಅಭಿವೃದ್ಧಿಪಡಿಸುವ 988.42 ಲಕ್ಷ ಕಾಮಗಾರಿಗೆ ಭಾನುವಾರ ಅರ್ಜುಣಗಿಯಲ್ಲಿ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಇದೊಂದು ಪ್ರಾಯೋಗಿಕ ಯೋಜನೆಯಾಗಿದೆ. ನಮ್ಮ ಮತಕ್ಷೇತ್ರದಲ್ಲಿ ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸುವ ಮೂಲಕ ನಂತರದ ದಿನಗಳಲ್ಲಿ ಇಡೀ ಜಿಲ್ಲೆಯಲ್ಲಿ ಸರಣಿ ಚೆಕ್ ಡ್ಯಾಂ ಯೋಜನೆಗೆ ಚಾಲನೆ ನೀಡಲಾಗುವದು. ಈ ಯೋಜನೆ ಯಶಸ್ವಿಯಾಗುವುದರಲ್ಲಿ ಯಾವುದೇ ಅನುಮಾನವೇ ಇಲ್ಲ. ಈ ನೀರಾವರಿ ಯೋಜನೆಯಿಂದ ಈ ಭಾಗದ ರೈತರಿಗೆ ಸಾಕಷ್ಟು ಅನುಕೂಲವಾಗಲಿದೆ ಎಂದರು.

ಈಗಾಗಲೇ ನಾನು ನೀರಾವರಿ ಕ್ಷೇತ್ರದಲ್ಲಿ ಮಾಡಿದ ಕಾರ್ಯವನ್ನು ನ್ಯೂಯಾರ್ಕ್ ಟೈಮ್ಸ್ ನವರು ವರದಿ ಮಾಡಿದ್ದಾರೆ. ಹಳ್ಳ-ಕೊಳ್ಳ ತುಂಬಿಸುವ



ಯೋಜನೆ ಯಶಸ್ಸಿಗೆ ಎಲ್ಲರೂ ಒತ್ತುವರಿ ತೆರವುಗೊಳಿಸುವ ಮೂಲಕ ಸಹಕರಿಸಬೇಕು ಎಂದರು.

ನಮ್ಮ ಮತಕ್ಷೇತ್ರದಲ್ಲಿ 58 ಹಳ್ಳಿಗಳಿವೆ. 48 ಗ್ರಾಮಗಳ ಹಳ್ಳಗಳಿಗೆಬಾಂದಾರ ನಿರ್ಮಿಸುತ್ತಿದ್ದೇವೆ. ಹಾಗಾಗಿ ನೀವೆಲ್ಲ ಸೌಭಾಗ್ಯವಂತರು ಎಂದು ಬಣ್ಣಿಸಿದರು.

ಜಿಲ್ಲೆಯಲ್ಲಿ 15ನೇ ಡಿಸ್ಟ್ರೀಬ್ಯೂಶನ್ ಕೆಲಸ ನಡೆದಿದೆ. ಮುಂದಿನ ಮಳೆಗಾಲಕ್ಕೆ 6 ಪ್ಯಾಕೇಜ್ ಸಿದ್ಧವಾಗಬೇಕು. ಸಣ್ಣ ನೀರಾವರಿ ಇಲಾಖೆಯಿಂದ ಪ್ರಯತ್ನಿಸೋಣ. ಒಂದು ವೇಳೆ ಅದು ಸಾಧ್ಯವಾದಲ್ಲಿ 118 ಹಳ್ಳಗಳಿಗೆ 176 ಕೋಟಿ ರೂ. ವೆಚ್ಚದಲ್ಲಿ ಹಳ್ಳ ತುಂಬಿಸುವ ಕಾರ್ಯ ಮಾಡುವುದಾಗಿ ಸಚಿವ ಎಂ.ಬಿ. ಪಾಟೀಲ ತಿಳಿಸಿದರು.

ಕೆರೆ ತುಂಬಿದ ಮೇಲೆ ಅಂತರ್ಜಲ ಹೆಚ್ಚಳವಾದ ಮಾದರಿಯಲ್ಲೇ, ಇದರಿಂದ ಇನ್ನಷ್ಟೂ ಅಂತರ್ಜಲ ಹೆಚ್ಚಳವಾಗಲಿದೆ ಎಂದರು.

ನೀರಾವರಿಯಿಂದ ಈ ಭಾಗದಲ್ಲಿ ಜಮೀನುಗಳು ಇಂದು 20 ಲಕ್ಷ ರೂ. ಬೆಲೆ ಬಾಳುತ್ತೇವೆ. ಅದಕ್ಕೆ ಜಮೀನು ಮಾರಾಟ ಮಾಡಬಾರದು ಎಂದು ಸಚಿವ ಎಂ.ಬಿ. ಪಾಟೀಲ ರೈತರಿಗೆ ಕಿವಿಮಾತು ಹೇಳಿದರು.

ಕೆರೆ ಮತ್ತು ಹಳ್ಳ ತುಂಬುವುದರಿಂದ ಅಂತರ್ಜಲ ಭರಪೂರವಾಗಲಿದೆ. ದಯುವಿಟ್ಟು, ಈ ಕನಸು ನನಸು ಮಾಡಲಿಕ್ಕೆ ಎಲ್ಲರೂ ಸಹಕಾರ ನೀಡಬೇಕು ಎಂದರು. ತಂಟೆ-ತಕರಾರು ಬಂದಲ್ಲಿ ಗ್ರಾಮದ ಹಿರಿಯರು ಇತ್ಯರ್ಥಪಡಿಸಿಕೊಂಡು ಸಹಕಾರ ನೀಡುವ ಮೂಲಕ ನೀರಾವರಿ ವಿಷಯದಲ್ಲಿ ಮಾದರಿಯಾಗುವುದರಲ್ಲಿ ಸಂಶವೇ ಇಲ್ಲ ಎಂದರು.

ಕೆರೆ, ಹಳ್ಳ-ಕೊಳ್ಳ ತುಂಬುವುದರಿಂದ ಹಾಗೂ ಬಾಂದಾರ ನಿರ್ಮಾಣದಿಂದ ಅಂತರ್ಜಲ ಮಟ್ಟ ಹೆಚ್ಚಾಗಲಿದೆ ಎಂದ ಸಚಿವರು,

ಕೆರೆ ತುಂಬುವ ಯೋಜನೆಗೆ ಬಿಎಲ್‌ಡಿಇ ಸಂಸ್ಥೆಯ ಫ.ಗು. ಹಳಕಟ್ಟಿ ಎಂಜಿನೀಯರಿಂಗ್ ಕಾಲೇಜ್ ನಲ್ಲಿ ರೂಪು-ರೇಷೆ ಸಿದ್ಧಪಡಿಸಿ ಯೋಜನೆಗೆ 2008ರಲ್ಲಿ ಚಾಲನೆ ನೀಡಿದ್ದು ದೇಶದಲ್ಲಿ ಮಾದರಿ ಕಾರ್ಯ ಎಂದರು.

ಆರಂಭದಲ್ಲಿ ತಾಂತ್ರಿಕ ಕಾರಣಗಳಿಂದ ಯೋಜನೆಗೆ ಕೈಗೂಡಲಿಲ್ಲ. ಬಳಿಕ ಇಡೀ ರಾಜ್ಯಾದ್ಯಂತ 6000 ಕೆರೆ ತುಂಬುವ ಮೂಲಕ ರೈತ ಸಂಕುಲಕ್ಕೆ ಅದ್ಭುತ ಕೊಡುಗೆ ನೀಡಿದ್ದನ್ನು ಸಚಿವ ಎಂ.ಬಿ. ಪಾಟೀಲ ಮೆಲಕು ಹಾಕಿದರು.

2013ರಲ್ಲಿ ನಾನು ನೀರಾವರಿ ಸಚಿವನಾಗಿದ್ದ ವೇಳೆ ಕೃಷ್ಣಾ ನ್ಯಾಯಾಧೀಕರಣದ ತೀರ್ಪು ಬಂದಿತ್ತು. ಹಣಮಾಪೂರ ಮತ್ತು ಬಳೂತಿ ಎರಡೇ ಸ್ಥಾವರಗಳಿದ್ದವು. ಒಂದು ಸಾವಿರ ಕಿಮೀ ಮುಖ್ಯ ಕಾಲುವೆ ಹಾಗೂ 9 ಸ್ಥಾವರ ನಿರ್ಮಾಣ ಮಾಡಲಾಗಿದೆ. ನೀರಾವರಿ ಕ್ಷೇತ್ರ ಹೆಚ್ಚಳವಾಗಿದ್ದರಿಂದ ಇಲ್ಲಿನ ಜನರಿಗೆ ಅನುಕೂಲವಾಗಿದೆ.

ತಿಕೋಟ ಎತ್ತರದ ಪ್ರದೇಶವಾಗಿದ್ದರಿಂದ ನೀರಾವರಿಗೊಳಪಡಿಸುವುದು ಸವಾಲಿನದ್ದಾಗಿತ್ತು. ಆದಾಗ್ಯೂ ನಾನು ಧೃತಿಗೆಡದೇ, 3600 ಕೋಟಿ ರೂ. ವೆಚ್ಚದ ತುಬಚಿ-ಬಬಲೇಶ್ವರ ಯೋಜನೆ ಮೂಲಕ ನೀರಾವರಿ ಸೌಲಭ್ಯ ಒದಗಿಸುವ ಕಾರ್ಯ ನಿರ್ವಹಿಸಲಾಗಿದೆ ಎಂದರು.

ಈ ಭಾಗದಲ್ಲಿ ಕೆರೆ ತುಂಬಿಸುವುದರಿಂದ ಪ್ರಯೋಜನವಾಗಿದೆ. ಕೆನಾಲ್ ನೆಟ್ ವರ್ಕ ಮೇಲೆ 176 ಹಳ್ಳಗಳಿವೆ. ಮಳೆಗಾಲದಲ್ಲಿ ಹಳ್ಳಗಳಿಗೆ ನೀರು ಕೊಡುವ ಯೋಜನೆ ರೂಪಿಸಲಾಗಿತ್ತು. ಒಂದು ಸಾವಿರ ಮೀಟರ್ ಒಂದು ಬಾಂದಾರ ನಿರ್ಮಿಸಿ ನೀರು ಹಿಂಗಿ ಬಾವಿ-ಬೋರವೆಲ್ ಗಳಿಗೆ ಅನುಕೂಲ ಕಲ್ಪಿಸಿದ್ದೇನೆ. ತನ್ಮೂಲಕ ಇಡೀ ಜಿಲ್ಲೆಯಲ್ಲಿ ಅಂತರ್ಜಲ ಮಟ್ಟ ಹೆಚ್ವಿಸುವ ಮಾದರಿ ಕೆಲಸ ಮಾಡಿದ್ದೇನೆ ಎಂದರು.

ಇಲ್ಲಿ ಹತ್ತು ಪ್ಯಾಕೇಜ್ ಅಂದಾಜು ಒಂದು ನೂರ ಕೋಟಿ ರೂ. ಈ ಅಂತರ್ಜಲ ಅಭಿವೃದ್ಧಿಪಡಿಸಲು ಇಲ್ಲಿಂದ ಪ್ರಾಯೋಗಿಕಾವಗಿ ಆರಂಭಿಸಲಾಗಿದೆ. ನಮ್ಮ ಮತಕ್ಷೇತ್ರದಲ್ಲಿ ಹತ್ತು ಪ್ಯಾಕೇಜ ನಿರ್ಮಿಸುವ ಗುರಿ ಹೊಂದಲಾಗಿದೆ ಎಂದರು.

ಮತಕ್ಷೇತ್ರದ 58 ಹಳ್ಳಗಳಿಗೆ 48 ಗ್ರಾಮಗಳಿಗೆ ಅನುಕೂಲ ಒದಗಲಿದೆ. ಬಳಿಕ ಇಡೀ ಜಿಲ್ಲೆಯ ಹಳ್ಳಗಳಿಗೆ ನೀರು ತುಂಬಿಸುವ ಕಾರ್ಯ ಮಾಡಲಾಗುವುದು ಎಂದರು.

ಬೋರವೆಲ್, ಬಾವಿಗಳಿಗೆ ನೀರು ಬರುವುದರಿಂದ ರೈತರಿಗೆ ಅನುಕೂಲವಾಗಲಿದೆ. ಈ ಕಾರ್ಯ ಗುಣಮಟ್ಟದಿಂದ ಕೂಡಿರಬೇಕು. ವ್ಯವಸ್ಥಿತವಾಗಿ ನಿರ್ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಸಾರ್ವಜನಿಕರು ಇದ್ದರು.

# ಸಂಘಟನೆಯಿಂದ ಬದಲಾವಣೆ ಸಾಧ್ಯ



**ಬೆಳಗಾವಿ ವಾರ್ತೆ ಧಾರವಾಡ:** ಸಂಘಟನೆ ಎಂಬುದು ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಾಕಷ್ಟು ಬದಲಾವಣೆ ತರುತ್ತದೆ ಎಂದು ಕರ್ನಾಟಕ ವಿಶ್ವವಿದ್ಯಾಲಯದ ವಿಶ್ರಾಂತಪ್ರಾಧ್ಯಾಪಕರೂ ಹಾಗೂ ಮೌಲ್ಯಮಾಪನ ವಿಭಾಗದ ಕುಲಸಚಿವರೂ ಆದ ಡಾ. ಕೆ.ಆರ್ದುರ್ಗಾದಾಸ್ ಅಭಿಪ್ರಾಯಪಟ್ಟರು.

ನಗರದ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆ ಆಯೋಜಿಸಿದ್ದ ವಿಶ್ವಗುರು ಬಸವೇಶ್ವರರ ಜಯಂತ್ಯುತ್ಸವ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪ್ರಸ್ತುತ ಸಮಾಜಕ್ಕೆ ಜನತೆಯ ಕಷ್ಟ-ಸುಖ ಕೇಳುವ ನಾಯಕರ ಅಗತ್ಯವಿದೆ. 12ನೇ ಶತಮಾನದಲ್ಲಿ ಬಸವಣ್ಣ ಎಲ್ಲ ಸಮಾಜದವರನ್ನು ತಮ್ಮ ವಚನಗಳಿಂದ ಆಯಸ್ಕಾಂತದಂತೆ ಸೆಳೆದು ಸಾಮಾಜಿಕ ಮತ್ತು ಧಾರ್ಮಿಕವಾಗಿದ್ದ ಅನೇಕ ಕಟ್ಟುಪಾಡುಗಳನ್ನು ಕಿತ್ತೊಗೆದು, ಸಾಮಾನ್ಯ ಜನರನ್ನು ಶಿವಶರಣ-ಶರಣೆಯರನ್ನಾಗಿಸುವುದರ ಮೂಲಕ ಅನುಭವ ಮಂಟಪದ ನಿರ್ಮಾತೃ ಆದರು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ಗೌರವ ಕಾರ್ಯದರ್ಶಿಗಳಾದ ಚಂದ್ರಕಾಂತ ಮಟ್ಟಿ, ಬಸವಣ್ಣ 12ನೇ ಶತಮಾನದಲ್ಲಿಯೇ ಮಹಿಳೆಯರಿಗೆ ಎಲ್ಲರೀತಿಯ ಸ್ವಾತಂತ್ರ ?? ನೀಡಿದವರು. ಜಾತಿ, ಲಿಂಗಬೇಧವಿಲ್ಲದ ಸಮಸಮಾಜ ನಿರ್ಮಿಸಿದವರು. ಬಸವಣ್ಣನವರ ವ್ಯಕ್ತಿತ್ವವನ್ನು ಅವರ ವಚನಗಳಲ್ಲಿ ನಾವಿಂದು ಕಾಣಬಹುದು ಎಂದರು.

ಇನ್ನೋರ್ವ ಅತಿಥಿಯಾದ ಲೆಕ್ಕಪರಿಶೋಧಕರಾದ ವಿಜಯ ಪಂಚಪ್ಪ ಇವರನ್ನು ಸಹ ಇದೇ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ ಸನ್ಮಾನಿಸಲಾಯಿತು. ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಆರ್.ಯು. ಬೆಳ್ಳಕ್ಕಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಬಸವ ಜಯಂತಿ ಪ್ರಯುಕ್ತ ಸಂಸ್ಥೆಯು ಹಮ್ಮಿಕೊಂಡಿದ್ದ ವಚನಗಾಯನ, ರಂಗೋಲಿ ಮತ್ತು ಶರಣರ ಛದ್ಮವೇಷ ಸ್ಪರ್ಧೆಗಳಲ್ಲಿ ಭಾಗವಹಿಸಿ ವಿಜೇತರಾದವರಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಯಿತು. ಸಂಸ್ಥೆಯ ಕಛೇರಿ ಅಧೀಕ್ಷಕರಾದ ಶಿವಲಿಂಗ ನೀಲಗುಂದ ಸ್ವಾಗತ ಮತ್ತು ನಿರೂಪಣೆ ಮಾಡಿದರು. ವಂದನಾರ್ಪಣೆಯನ್ನು ಡಿ.ಬಿ. ಹೊಂಬಳ ನೆರವೇರಿಸಿದರು.

# ಭಾರಿ ಗಾಳಿ, ಮಳೆ: ನೆಲ್ಕರುಳಿದ ಮರಗಳು



**ಬೆಳಗಾವಿ ವಾರ್ತೆ ನವಲಗುಂದ:** ಪಟ್ಟಣವೂ ಸೇರಿದಂತೆ ತಾಲೂಕಿನ ಹಲವಾರು ಗ್ರಾಮಗಳಲ್ಲಿ ಗುಡುಗು.ಸಿಡಿಲು ಸಹಿತ ಭಾರಿ ಗಾಳಿಯಿಂದ ಕೂಡಿದ ಮಳೆ ಸುರಿದು ಹಲವಾರು ಮರಗಳು ನೆಲಕ್ಕುರುಳಿದ ಘಟನೆ ಭಾನುವಾರ ಸಂಜೆ 3.30 ಕ್ಕೆ ಜರುಗಿದೆ.

ತಾಲ್ಲೂಕಿನ ಬೆಳಹಾರ ಗ್ರಾಮದಲ್ಲಿನ ಹೊಟ್ಟಿನ ಗೋದಾಮಿಗೆ ಸಿಡಿಲು ಬಡಿದು ಬೆಂಕಿ ಅವಘಡ ಸಂಭವಿಸಿದ್ದು ಅಣ್ಣಿಗೇರಿಯಿಂದ ಆಗಮಿಸಿದ್ದ ಅಗ್ನಿ ಶಾಮಕ ದಳ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಶಯಶ್ವಿಯಾಗಿದ್ದು ಅದೃಷ್ಟವಶಾತ ಯಾವುದೇ ಜೀವ ಆನಿಯಾದ ಬಗ್ಗೆ ವರದಿಯಾಗಿಲ್ಲ.

ಭಾರೀ ಗಾಳಿಯಿಂದ ಕೂಡಿದ ಮಳೆಯಿಂದಾಗಿ ಗ್ರಾಮಾಂತರ ಪ್ರದೇಶಗಳಿಗೆ ಸರಬರಾಜಾಗುತ್ತಿರುವ ವಿದ್ಯುತ್ ಕಂಬಳು ನೆಲಕಚ್ಚಿದ್ದು ತಾಲೂಕಿನಾದ್ಯಂತ ಸತತ 4 ಗಂಟೆಗಳಿಂದ ವಿದ್ಯುತ್ ವ್ಯತ್ಯಯವಾಗಿದೆ.

ಪಟ್ಟಣದ ಹೊರವಲಯದಲ್ಲಿನ ಅಂಬಲಿ ಹಳ್ಳದ ಕೆಳ ಮಟ್ಟದ ಸೇತುವೆ ಮುಳುಗಿದ್ದರಿಂದ ಇಬ್ರಾಹಿಂಪೂರ ಗ್ರಾಮಕ್ಕೆ ತೆರಳುತ್ತಿದ್ದ ಬಸ್ ಹಳ್ಳದ ಹತ್ತಿರ ನಿಂತು ಮಳೆ ನೀರು ಹರಿವು ಕಡಿಮೆಯಾದ ಮೇಲೆ ಗ್ರಾಮಕ್ಕೆ ತೆರಳಿದ ಘಟನೆ ಜರುಗಿತು.

ಪಟ್ಟಣ ತಹಶೀಲ್ದಾರ ಕಚೇರಿ ಆವರಣದಲ್ಲಿಯ ದೇವಸ್ಥಾನ ಪಕ್ಕದಲ್ಲಿನ ಮರ ಬಿದ್ದಿದೆ. ರಬಸದ ಗಾಳಿಗೆ ಶೆಟ್ಟರ ಕೆರೆಯ ಹತ್ತಿರ ಇರುವ ಅಂಗಡಿಗಳ ಮೇಲಿನ ತಗಡುಗಳು ಹಾರಿ ಬಿದ್ದು ರಸ್ತೆಯಲ್ಲಿ ಚಲಿಸುತ್ತಿದ್ದ ಕುಮಾರಗೊಪ್ಪ ಗ್ರಾಮದ ದ್ವಿಚಕ್ರವಾಹನ ಸವಾರ ತಲೆ ಪೆಟ್ಟಾಗಿದೆ. ಅಕಾಲಿಕ ಮಳೆಯಿಂದಾಗಿ ಪಟ್ಟಣವೂ ಸೇರಿದಂತೆ ತಾಲ್ಲೂಕಿನ ಬೇರೆ,ಬೇರೆ ಗ್ರಾಮಗಳಲ್ಲಿ ಬಸವಜಯಂತಿ ಹಾಗೂ ಇತರೆ ಸಂದರ್ಭಗಳಲ್ಲಿ ನಡೆಸಲಿರುವ ಹಾಗೂ ನಡೆಯುತ್ತಿರುವ ಗ್ರಾಮದೇವಿ ಹಾಗೂ ನಾನಾ ಜಾತ್ರ ಮಹೋತ್ಸವಕ್ಕೆ ಅಡ್ಡಿಯುಂಟು ಮಾಡಿದ್ದಲ್ಲದೆ ಮದುವೆ ಹಾಗೂ ಗ್ರಹಪ್ರವೇಶ ಮನೆ ಮುಂದಿನ ಶ್ಯಾಮಿಯಾನ ಹಾರಿದ ಪ್ರಸಂಗ ಜರುಗಿದೆ.



ಹುಬ್ಬಳ್ಳಿ: ತಾಲೂಕಿನ ಕುಸುಗಲ್ ಗ್ರಾಮದ ಶ್ರೀ ರಾಯಬಸವೇಶ್ವರ ಗುಡಿ ಓಣಿಯಲ್ಲಿ ಶ್ರೀ ಬಸವಣ್ಣನವರ ಭಾವಚಿತ್ರ ಹಾಗೂ ಎತ್ತುಗಳ ಮೆರವಣಿಗೆಗೆ ಚಾಲನೆ ನೀಡುವ ಮೂಲಕ ಶ್ರೀ ಬಸವ ಜಯಂತಿ ಕಾರ್ಯಕ್ರಮವನ್ನು ಸಂಭ್ರಮದಿಂದ ಆಚರಿಸಲಾಯಿತು. ಈ ವೇಳೆ ಹಿರಿಯರಾದ ಯಲ್ಲಪ್ಪ ಬಾಲೇಹೊಸೂರ, ಸಿದ್ರಾಮಪ್ಪ ತುಕ್ಕಣ್ಣವರ, ಯಲ್ಲಪ್ಪ ಲದ್ದಿಯವರ, ನಿಂಗಪ್ಪ ಹುಡೇದ್, ಬಸಪ್ಪ ಮೆಣಸಿನಕಾಯಿ, ತಿರಕಪ್ಪ ಅಳಗವಾಡಿ, ದಾನಪ್ಪ ಕೊಪ್ಪದ, ಜಗದೀಶ್ ಅಳ್ಳೂರ, ಗುರಸಿದ್ದಪ್ಪ ಬರದ್ವಾಡ, ಬಸವರಾಜ ತುಕ್ಕಣ್ಣವರ ಗ್ರಾಮದ ಯುವಕರು ಇನ್ನಿತರರು ಇದ್ದರು.

# ಜಗಜ್ಯೋತಿ ಬಸವೇಶ್ವರ ಜಯಂತಿ ಆಚರಣೆ

**ಬೆಳಗಾವಿ ವಾರ್ತೆ ನವಲಗುಂದ:** ಸ್ಥಳೀಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ಜಗಜ್ಯೋತಿ ಬಸವೇಶ್ವರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಜಯಂತಿ ಆಚರಿಸಿದರು.

ಮುಖ್ಯಅತಿಥಿಗಳಾದ ಶ್ರೀಧರ ಲೋನಕರ ಮಾತನಾಡಿ ಗ್ರಂಥಪಾಲಕರು ಹಾಗೂ ಬಸವ ತತ್ವಗಳ ಚಿಂತಕರಾದ ಬಸವೇಶ್ವರರು 12 ನೇ ಶತಮಾನ ತನ್ನದೇ ಆದ ಮಹತ್ವ ಪಡೆದಿದ್ದು ಜಗಜ್ಯೋತಿ ಬಸವೇಶ್ವರವರು ಸರಳ ವಚನಗಳ ಮುಖಾಂತರ ಸಮಾಜದಲ್ಲಿರುವ ಅನಿಷ್ಟಗಳ ನಿರ್ಮೂಲನೆಗೆ ಪ್ರಯತ್ನಿಸಿದರು ಹಾಗೂ ಎಲ್ಲ ವರ್ಗಗಳ ಜನರಲ್ಲಿ ಸಮಾನತೆ ತರಲು ಹಗಳಿರಲು ಶ್ರಮಿಸಿದ ಇವರ ಆದರ್ಶಗಳು ನಮಗೆಲ್ಲ ಅನುಕರಣೆಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ ಎಂ ಬಿ ಬಾಗಡಿ



ಮಾತನಾಡುತ್ತ ಬೀದರ ಜಿಲ್ಲೆಯ ಬಸವಕಲ್ಯಾಣದಲ್ಲಿ ಅನುಭವ ಮಂಟಪ ಸ್ಥಾಪಿಸಿ ಜಾತಿ, ಲಿಂಗ ಬೇಧವಿಲ್ಲದೆ ಎಲ್ಲಾ ಶರಣರು, ಕವಿಗಳು ಮತ್ತು ತತ್ವಜ್ಞಾನಿಗಳು ಒಗ್ಗೂಡಿ ವಚನಗಳ ಮೂಲಕ ಸಾಮಾಜಿಕ ಸಮಾನತೆ ಹಾಗೂ ಕಾಯಕ ತತ್ವವನ್ನು ಚರ್ಚಿಸಲು ಪ್ರಯತ್ನಿಸಿದ ಕೀರ್ತಿ ಬಸವಣ್ಣವರಿಗೆ ಸಲ್ಲುತ್ತದೆ ಎಂದರು.

ಪ್ರೊ ಆರ್‌ ಬಿ ಸಾತಿಹಾಳ, ಸಂತೋಷ ಹುಬ್ಬಳ್ಳಿ, ಪ್ರಸನ್ನ ಪಂಢರಿ, ನಾಗರತ್ನ ಕುರಡೇಕರ್, ಬಿ.ವಿ. ಏಣಗಿ, ಸವಿತಾ ಚಿಕ್ಕಣ್ಣವರ, ಗಣೇಶ ಧೋಂಗಡಿ, ಗಂಗಾಧರ ಗೌಡರ , ಪ್ರತಿಭಾ ನಿಡಗುಂದಿ , ವೈ ಎನ್ ಗುಲಗಂಧಿ, ಪ್ರವೀಣ ದೊಡಮನಿ , ಜ್ಯೋತಿಭಾ ದೊಡಮನಿ , ಖಾದಿರಬಿ ನಧಾಪ , ವಸಂತ ಮುಂದಿನಮನಿ, ಮಂಜುನಾಥ ಜಾಡರ , ಮಲ್ಲಿಕಾರ್ಜುನ ಗಡಾದ, ಮಧು ಹುಣಸಗಿ ಮುಂತಾದವರು ಇದ್ದರು. ಸುಜಾತಾ ಬರದೂರ ಸ್ವಾಗತಿಸಿ, ನಿರೂಪಿಸಿದರು. ರವಿ ಬ್ಯಾಹಟ್ಟಿ ವಂದಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001